
ಗರಿಷ್ಠ 37°c | ಕನಿಷ್ಠ 24°c



## ಅಧಿಕಾರ ಸ್ವೀಕಾರ

ಚನ್ನಗಿರಿ: ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ನೂತನ ಕಲ್ಯಾಣಾಧಿಕಾರಿ ಶಾಂತ ಕುಮಾರ್‌ಎಚ್. ಮುದಿಹಾಳ್ ಗುರುವಾರ ಸಂಜೆ ಅಧಿಕಾರವನ್ನು ವಹಿಸಿಕೊಂಡರು. ಕಲ್ಯಾಣಾಧಿಕಾರಿಯಾಗಿದ್ದ ರವೀಂದ್ರಕುಮಾರ್‌ಅಥರ್ಗಾ ಅವರು ದಾವಣಗೆರೆಯ ಅಲ್ಪ ಸಂಖ್ಯಾತರ ಇಲಾಖೆಯಲ್ಲಿ ವಿಸ್ತೀರ್ಣಾಧಿಕಾರಿಯಾಗಿವರ್ಗಾವಣೆಗೊಂಡಿದ್ದರು. ಅವರವರ್ಗದಿಂದತೆರವಾದಸ್ಥಾನಕ್ಕೆಶಾಂತಕುಮಾರ್ ಅಧಿಕಾರಿಯಾಗಿ ಆಗಮಿಸಿದ್ದಾರೆ. ಕಚೇರಿ ಸಿಬ್ಬಂದಿ ಸ್ವಾಗತ ಕೋರಿ ಶಾಂತಕುಮಾರ ಅವರನ್ನು ಗೌರವಿಸಿದರು. ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಎನ್.ಪಿ.ಎಸ್. ನೌಕರರಸಂಘದಅಧ್ಯಕ್ಷಗೋಪಾಲ್ ಪವಾರ್, ಇಲಾಖಾ ಸಿಬ್ಬಂದಿ ಹಾಜರಿದ್ದರು.



ಚನ್ನಗಿರಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಮಾಡಾಳು ವಿರೂಪಾಕ್ಷಪ್ಪ ಅವರ 75ನೇ ಹುಟ್ಟುಹಬ್ಬದ ಹಿನ್ನೆಲೆ ಅವರ ನಿವಾಸಕ್ಕೆ ಕನ್ನಡಪ್ರಭ ಸಹಾಯಕ ಪ್ರಧಾನ ವ್ಯವಸ್ಥಾಪಕ ಕಾರ್ತಿಕ್ ಸಿ. ಮೌಳಿ, ಜಾಹೀರಾತು ವಿಭಾಗದ ವ್ಯವಸ್ಥಾಪಕ ಸುಧೀಂದ್ರ ಟಿ.ಆರ್., ತಾಲೂಕು ವರದಿಗಾರ ಬಾ.ರಾ.ಮಹೇಶ್ ತೆರಳಿ ಮಾಜಿ ಶಾಸಕರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ಕೋರಿ ಅಭಿನಂದಿಸಿದರು.



ಧಾರವಾಡದ ಜೆಎಸ್‌ಎಸ್ ಹಾಲಭಾವಿ ಸ್ಕೂಲ್ ಆಫ್ ಆರ್ಟ್ಸ್ ನಲ್ಲಿ ಇತ್ತೀಚೆಗೆ ಆಯೋಜಿಸಿದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ದಾವಣಗೆರೆಯ ದೃಶ್ಯಕಲಾ ಮಹಾವಿದ್ಯಾಲಯದ ಬೋಧನಾ ಸಹಾಯಕ ದತ್ತಾತ್ರೇಯ ಎನ್. ಭಟ್ ಅವರಿಗೆ 2025ನೇ ಸಾಲಿನ ಕಲಾನ್ವೇಷಕ ಪ್ರೊ. ಎಸ್.ಸಿ. ಪಾಟೀಲ್ ರಾಷ್ಟ್ರೀಯ ಪುರಸ್ಕಾರ ಪ್ರದಾನ ಮಾಡಲಾಯಿತು. ರಾಷ್ಟ್ರೀಯ ದೃಶ್ಯ ಕಲಾ ಅಕಾಡೆಮಿ ಅಧ್ಯಕ್ಷ ಪ್ರೊ. ಎಸ್.ಸಿ. ಪಾಟೀಲ, ಕರ್ನಾಟಕ ಜಾನಪದ ವಿವಿ ಕುಲಪತಿ ಪ್ರೊ. ಟಿ.ಎಂ. ಭಾಸ್ಕರ ಇತರರು ಇದ್ದರು.

## ಸುದ್ದಿ ಸಿಂಚನ

### ಇಂದಿನಿಂದ ಹಲಸಬಾಳು ಊರಮ್ಮದೇವಿ ಉತ್ಸವ

ಹರಿಹರ: ತಾಲೂಕಿನ ಹಲಸಬಾಳು ಗ್ರಾಮದ ಗ್ರಾಮದೇವತೆ ಊರಮ್ಮ ದೇವಿ ಉತ್ಸವವು ಮೇ 4ರಿಂದ ಮೇ 8ರವರೆಗೆ ನಡೆಯಲಿದೆ. ಮೇ 4ರಂದು ಬೆಳಗ್ಗೆ 8 ಗಂಟೆಯಿಂದ ಗ್ರಾಮದೇವತೆ (ಊರಮ್ಮ)



ದೇವಸ್ಥಾನದಲ್ಲಿ ದೇವಿಗೆ ಸಕಲ ಪೂಜೆ, ಪುನಸ್ಕಾರಗಳು ನಡೆಯಲಿವೆ. ಮೇ 5ರಂದು ಬೆಳಗ್ಗೆ 8.30ರಿಂದ ಅಭಿಷೇಕ, ಪೂಜೆ, ಅಲಂಕಾರ, ಕುಂಕುಮಾರ್ಚನೆ, ಭಕ್ತರಿಂದ ಫಲಪುಷ್ಪ ಸರ್ಮಪಣೆ, ಹರಕೆ ಸಲ್ಲಿಕೆ ನಡೆಯಲಿದೆ. ಮಧ್ಯಾಹ್ನ 12.48ರ ಅಭಿಜಿತ್ ಮುಹೂರ್ತದಲ್ಲಿ ಗ್ರಾಮ ದೇವತೆಗೆ ಮಾಂಗಲ್ಯಧಾರಣೆ, ಸಂಜೆ 5 ರಿಂದ ಡೊಳ್ಳು, ಭಜನೆ, ಕರಡಿ ಮಜಲು ಸೇರಿದಂತೆ ವಿವಿಧ ವಾದ್ಯ, ಮೇಳಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ, ಚರಗ ಬೇಯಿಸಿ ರಾಶಿ ಮಾಡಿ ದೇವಸ್ಥಾನ ಎದುರಿಗೆ ನಿರ್ಮಿಸಿರುವ ಸ್ಥಳದಲ್ಲಿ ಉತ್ಸವ ಮೂರ್ತಿ ಪ್ರತಿಷ್ಠಾಪನೆ ನಡೆಯಲಿದೆ. ಮೇ 6ರಂದು ಬೆಳಗಿನ ಜಾವ 4.30 ರಿಂದ ಗ್ರಾಮದ ಶ್ರೀ ಆಂಜನೇಯ ದೇವಸ್ಥಾನದಿಂದ ಘಟ್ಟಗಡಿಗೆ ಮತ್ತು ಹಿಟ್ಟಿನಿಂದ ಮಾಡಿದ ಕೋಣವನ್ನು ಉತ್ಸವದ ಮೂಲಕ, ಗ್ರಾಮ ದೇವತೆ ಊರಮ್ಮ ದೇವಸ್ಥಾನದ ಎದುರು ತಂದು, ಹಿಟ್ಟಿನ ಕೋಣನ ವಧೆ ಮಾಡಲಾಗುವುದು. ಅನಂತರ ಚರಗ ಚಲ್ಲುವುದು. ಮಧ್ಯಾಹ್ನ 12 ಗಂಟೆಗೆ ಊರಮ್ಮ ದೇವಿಗೆ ಮಂಗಳ ಸ್ನಾನ, ಅಂಲಕಾರ ಮಾಡಲಾಗುತ್ತದೆ. ಮೇ 7ರಂದು ಸಂಜೆ ಗ್ರಾಮದೇವತೆ ದೇವಸ್ಥಾನದ ಮುಂಭಾಗ ರಾಣಿಗರಿಂದ ವಿವಿಧ ವಿನೋದಾವಳಿಗಳು ಜರುಗಲಿವೆ. ಹಾವೇರಿಯ ಜ್ಯೂ. ರಾಜಕುಮಾರ ಅಶೋಕ ಬಸ್ತಿ ಅವರಿಂದ ರಸಮಂಜರಿ ಕಾರ್ಯಕ್ರಮ. ಮೇ 8ರ ಬೆಳಗ್ಗೆ 10.30 ಬಣಕಾರ ಮತ್ತು ಗೌಡರ ಮನೆಯವರಿಂದ ಆರತಿ, ಉಡಿ ತುಂಬುವ, ನೂತನ ಕೋಣನನ್ನು ಬಿಡುವ ಕಾರ್ಯಕ್ರಮ. ಸಂಜೆ ಜಾತ್ರೆ ಮುಕ್ತಾಯ ಆಗಲಿದೆ.

### ಶಿಕ್ಷಕರ ಸಂಘಕ್ಕೆ ಆಯ್ಕೆ

ಹರಿಹರ: ತಾಲೂಕು ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ 2026 ರಿಂದ 2031ರವರೆಗಿನ ಐದು ವರ್ಷದ ಅವಧಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡುವ ಚುನಾವಣೆಯಲ್ಲಿ ಶೇ.91.82 ಮತದಾನ ದಾಖಲಾಗಿದೆ. ತಾಲೂಕಿನ ಘಟಕದಲ್ಲಿ ಮಹಿಳಾ ಮೀಸಲು 3 ಸ್ಥಾನಗಳನ್ನು ಸೇರಿಸಿ ಒಟ್ಟು 11 ಸ್ಥಾನಗಳಿಗೆ 16 ಅಭ್ಯರ್ಥಿಗಳು ಸ್ಪರ್ಧಿಸಿದ್ದರು. ಶುಕ್ರವಾರ ಬೆಳಗ್ಗೆ 8.30ರಿಂದ ಸಂಜೆ 4 ಗಂಟೆವರೆಗೆ ನಡೆದ ಮತದಾನದಲ್ಲಿ 514 ಶಿಕ್ಷಕರ ಪೈಕಿ 472 ಮಂದಿ ತಮ್ಮ ಹಕ್ಕು ಚಲಾಯಿಸಿದರು. ಸಂಜೆ 5 ಗಂಟೆಯಿಂದ ನಡೆದ ಮತ ಎಣಿಕೆ ಪ್ರಕ್ರಿಯೆಯಲ್ಲಿ ಶರಣಕುಮಾರ್‌ಹೆಗಡೆ (312), ಜಿ.ಕೆ. ರಾಜು (265), ಚಂದ್ರಪ್ಪ ಹೆಚ್. (252), ಅರುಣಕುಮಾರ್‌ಬಿ. (241), ಪರಶುರಾಮ ಗೋಪನಾಳ್ (239), ವೀರಪ್ಪ ಬಿ.ಎನ್. (239), ಸಿದ್ದಪ್ಪ ಸಂಗಣ್ಣನವರ್(238), ತಿಪ್ಪೇಸ್ವಾಮಿ (236) ಆಯ್ಕೆಯಾದರು. ಮಹಿಳಾ ಮೀಸಲು ಕ್ಷೇತ್ರದಿಂದ ಎಚ್. ಜ್ಯೋತಿ (297), ವಿ. ಜಯಶ್ರೀ (270), ಗುಲಾಬ್ ಜಾನ್ (216) ಮತಗಳನ್ನು ಪಡೆದು ಜಯಶೀಲರಾಗಿದ್ದಾರೆಎಂದುಚುನಾವಣಾಧಿಕಾರಿಎಚ್. ಕೊಟ್ರಪ್ಪ ಹಾಗೂ ಸಹಾಯಕ ಚುನಾವಣಾಧಿಕಾರಿ ಎಸ್.ಎಚ್. ಹೂಗಾರ ತಿಳಿಸಿದ್ದಾರೆ.

### 15% ರಿಯಾಯ್ತಿ ಮಾರಾಟ

ದಾವಣಗೆರೆ: ಲಿಡ್ಕರ್‌ನಿಗಮದಿಂದ ನಗರದ ಎ.ವಿ.ಕೆ. ಕಾಲೇಜು ರಸ್ತೆ ಹಾಗೂ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ ಮಳಿಗೆ ನಂ.11 ಜಗಳೂರು ಪ್ಲಾಟ್ ಫಾರಂ ಇಲ್ಲಿ ಕಾರ್ಮಿಕ ದಿನಾಚರಣೆ ಮತ್ತು ಬಕ್ರೀದ್ ಹಬ್ಬದ ಪ್ರಯುಕ್ತ ಏ.29 ರಿಂದ ಮೇ 31 ರವರೆಗೆ ಅಪ್ಪಟ ಚರ್ಮದ ಪಾದರಕ್ಷೆ, ಶೂ, ಬೆಲ್ಟ್, ಪರ್ಸ್ ಮಹಿಳೆಯರ ಪಾದರಕ್ಷೆ, ಶೂ, ಪರ್ಸ್, ವ್ಯಾನಿಟಿ ಬ್ಯಾಗ್‌ಗಳ ಮಾರಾಟದ ಮೇಲೆ ಶೇ.15 ರಿಯಾಯಿತಿ ಮಾರಾಟ ಕಲ್ಪಿಸಲಾಗಿದೆ ಎಂದು ವ್ಯವಸ್ಥಾಪಕರು ಹಾಗೂ ಜಿಲ್ಲಾ ಸಂಯೋಜಕರು ತಿಳಿಸಿದ್ದಾರೆ.



# ಇಂದು ದಾವಣಗೆರೆ ದಕ್ಷಿಣ ಕ್ಷೇತ್ರ ಮತ ಎಣಿಕೆ

## ಡಿಆರ್‌ಆರ್ ಮತ ಎಣಿಕಾ ಕೇಂದ್ರಕ್ಕೆ 3 ಹಂತದ ಭದ್ರತೆ: ಪಾಲಿಕೆಯಲ್ಲಿ ಚುನಾವಣಾಧಿಕಾರಿ ಸಂತೋಷಕುಮಾರ ಮಾಹಿತಿ

## ಒಟ್ಟು 13 ಟೇಬಲ್‌ನಲ್ಲಿ 21 ಸುತ್ತಿನ ಎಣಿಕೆ, 25 ಅಭ್ಯರ್ಥಿಗಳ ಭವಿಷ್ಯ ನಿರ್ಧಾರಕ್ಕೆ ಕ್ಷಣಗಣನೆ | ಸಿಸಿಟಿವಿ ಕಣ್ಗಾವಲು

• **ಕನ್ನಡಪ್ರಭ ವಾರ್ತೆ** ದಾವಣಗೆರೆ

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಮತ ಎಣಿಕೆ ಕಾರ್ಯವು ನಗರದ ಡಿಆರ್‌ಆರ್ ಶಾಲೆಯಲ್ಲಿ ಮೇ 4ರಂದು ಒಟ್ಟು 13 ಟೇಬಲ್‌ನಲ್ಲಿ21 ಸುತ್ತುಗಳಲ್ಲಿನಡೆಯಲಿದೆ. ಮತಗಳ ಎಣಿಕೆಗೆ ಎಲ್ಲ ಅಗತ್ಯ ಸಿದ್ಧತೆ ಕೈಗೊಂಡಿದ್ದು, ಬಿಗಿ ಪೊಲೀಸ್ ಬಂದೋಬಸ್ತ್ ಹಾಗೂ ಡಿಜಿಟಲ್ ತಪಾಸಣೆ ವ್ಯವಸ್ಥೆ ಮಾಡಲಾಗಿದೆ ಎಂದು ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಉಪ ವಿಭಾಗಾಧಿಕಾರಿ ಸಂತೋಷಕುಮಾರ ತಿಳಿಸಿದ್ದಾರೆ.

ನಗರದ ಮಹಾನಗರ ಪಾಲಿಕೆಯಲ್ಲಿ ಸ್ಥಾಪಿಸಿರುವ ಕ್ಷೇತ್ರದ ಚುನಾವಣಾಧಿಕಾರಿ ಕಚೇರಿಯಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಅಭ್ಯರ್ಥಿಗಳು, ಏಜೆಂಟರು ಹಾಗೂ ಸಿಬ್ಬಂದಿಗೆ ಕ್ಯೂಆರ್ ಕೋಡ್ ಹೊಂದಿರುವ ಡಿಜಿಟಲ್ ಗುರುತಿನ ಚೀಟಿ ನೀಡಲಾಗಿದೆ. ಜಿಲ್ಲಾಡಳಿತ ಎಲ್ಲ ರೀತಿ ತಾಂತ್ರಿಕ, ಭದ್ರತಾ ಸಿದ್ಧತೆಗಳನ್ನೂ ಪೂರ್ಣಗೊಳಿಸಿದ್ದು, ಮತ ಎಣಿಕೆ ಸರಾಗ, ಪಾರದರ್ಶಕ ನಡೆಸಲು ಅಗತ್ಯ ಕ್ರಮ ಕೈಗೊಂಡಿದೆ ಎಂದರು.

ಮತ ಎಣಿಕೆ ಕೇಂದ್ರದಲ್ಲಿ ಇವಿಎಂ ಎಣಿಕೆಗೆ 1 ಕೊಠಡಿ ಹಾಗೂ ಅಂಚೆ ಮತಪತ್ರ ಎಣಿಕೆಗೆ ಪ್ರತ್ಯೇಕ ಕೊಠಡಿ ವ್ಯವಸ್ಥೆ ಮಾಡಿದೆ. ಸೋಮವಾರ ಬೆಳಗ್ಗೆ 7.30ಕ್ಕೆ ಅಭ್ಯರ್ಥಿಗಳು ಮತ್ತು ಏಜೆಂಟರ ಸಮ್ಮುಖದಲ್ಲಿ ಸ್ಟ್ರಾಂಗ್ ರೂಂ ತೆರೆಯಲಾಗುವುದು.



ಬೆಳಗ್ಗೆ 8 ಗಂಟೆಗೆ ಅಂಚೆ ಮತಪತ್ರಗಳ ಎಣಿಕೆ ಆರಂಭವಾಗಲಿದೆ. ಅನಂತರ 8.30ರಿಂದ ಇವಿಎಂ ಯಂತ್ರಗಳ ಎಣಿಕೆ ಪ್ರಕ್ರಿಯೆ ಶುರುವಾಗಲಿದೆ ಎಂದು ಅವರು ಹೇಳಿದರು.

ಕ್ಷೇತ್ರದ ಮತ ಎಣಿಕೆಗಾಗಿ ಒಟ್ಟು 14 ಟೇಬಲ್ ಅಳವಡಿಸಿದ್ದು, ಪೋಸ್ಟಲ್ ಬ್ಯಾಲೆಟ್ ಮತ್ತು ಇಟಿಪಿಬಿಎಸ್‌ಗಾಗಿ ಪ್ರತ್ಯೇಕ 1 ಟೇಬಲ್ ವ್ಯವಸ್ಥೆ ಮಾಡಿದೆ. 21 ಸುತ್ತುಗಳ ಮತ ಎಣಿಕೆ ನಡೆಯಲಿದೆ. ಪ್ರತಿ ಟೇಬಲ್‌ಗೆ ಕೌಂಟಿಂಗ್ ಸೂಪರ್‌ವೈಸರ್, ಮೈಕ್ರೋಅಬ್ಸರ್ವರ್‌ಹಾಗೂಕೌಂಟಿಂಗ್‌ಅಸಿಸ್ಟೆಂಟ್ ನೇಮಿಸಲಾಗಿದೆ. ಮತಎಣಿಕೆಕಾರ್ಯದ ದಿನ ಬೆಳಗ್ಗೆ 5ರಿಂದ ಸಿಬ್ಬಂದಿಗೆ ಅಂತಿಮ ಹಂತದ ಟೇಬಲ್ ಹಂಚಿಕೆ ಪ್ರಕ್ರಿಯೆ (Third Randomization) ನಡೆಯಲಿದೆ ಎಂದು ಅವರು ತಿಳಿಸಿದರು.

ಮತ ಎಣಿಕೆ ಕೇಂದ್ರದ ಸುತ್ತಮುತ್ತ ಯಾವುದೇ ಅಹಿತಕರ ಘಟನೆ ನಡೆಯದಂತೆ 3 ಹಂತದ ಭದ್ರತೆ ಕೈಗೊಂಡಿದೆ. ಮೊದಲ ಹಂತದಲ್ಲಿ ಮತ ಎಣಿಕೆ ಕೇಂದ್ರದ ಸುತ್ತಲಿನ 100 ಮೀಟರ್‌ವ್ಯಾಪ್ತಿಯನ್ನು ಪಾದಾಚಾರಿ ವಲಯವೆಂದು ಘೋಷಿಸಿದ್ದು, ಅಲ್ಲಿ ವಾಹನಸಂಚಾರನಿರ್ಬಂಧಿಸಿದೆ. ಕೇಂದ್ರದಎರಡನೇ ಹಂತದಲ್ಲಿ ಡಿ.ಎ.ಆರ್. ಪೊಲೀಸರು ತಪಾಸಣೆ ನಡೆಸಲಿದ್ದಾರೆ. 3ನೇ ಹಂತದಲ್ಲಿ ಮತ ಎಣಿಕೆ ಕೊಠಡಿಯ ಪ್ರವೇಶ ದ್ವಾರದಲ್ಲಿ ಸಿಐಎಸ್‌ಎಫ್ ಸಿಬ್ಬಂದಿ ಅತ್ಯಾಧುನಿಕ ತಪಾಸಣೆ ನಡೆಸಲಿದ್ದಾರೆ ಎಂದು ವಿವರಿಸಿದರು.

ಕ್ಷೇತ್ರದಲ್ಲಿ25 ಅಭ್ಯರ್ಥಿಗಳುಸ್ಪರ್ಧೆಯಲ್ಲಿದ್ದಾರೆ. ಪ್ರತಿ ಟೇಬಲ್‌ಗೆ ಒಬ್ಬರಂತೆ ಅಭ್ಯರ್ಥಿಗಳು ತಮ್ಮ ಏಜೆಂಟರನ್ನು ನೇಮಿಸಿಕೊಳ್ಳಲು ಅವಕಾಶವಿದೆ. ಮತ ಎಣಿಕೆ ಕೇಂದ್ರದೊಳಗೆ ಪ್ರವೇಶಿಸಲು ಕಟ್ಟುನಿಟ್ಟಾದ ನಿಯಮ ಪಾಲಿಸಬೇಕು. ಅಧಿಕೃತ ಪಾಸ್ ಇಲ್ಲದ ಯಾರಿಗೂ ಎಣಿಕೆ ಕೇಂದ್ರದೊಳಗೆ ಪ್ರವೇಶ ಇರುವುದಿಲ್ಲ. ಈ ಸಲದ ವಿಶೇಷವೆಂದರೆ, ಅಭ್ಯರ್ಥಿಗಳು, ಏಜೆಂಟರು ಹಾಗೂ ಸಿಬ್ಬಂದಿಗೆ ಕ್ಯೂಆರ್‌ಕೋಡ್ ಹೊಂದಿರುವ ಡಿಜಿಟಲ್ ಗುರುತಿನ ಚೀಟಿ ನೀಡಲಾಗಿದೆ. ಸಿ.ಐ.ಎಸ್.ಎಫ್. ಸಿಬ್ಬಂದಿ ಮೊಬೈಲ್ ಆಪ್‌ಮೂಲಕಈಕೋಡ್‌ಸ್ಕ್ಯಾನ್‌ಮಾಡಿಅಧಿಕೃತತೆ ಖಚಿತಪಡಿಸಿಕೊಂಡ ನಂತರವೇ ಒಳಗೆ ಬಿಡಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಕೇಂದ್ರದೊಳಗೆ ಮತ್ತು ಹೊರಗೆ ಯಾವುದೇ ಅಹಿತಕರ ಘಟನೆ ನಡೆಯದಂತೆ ತಡೆಯಲು ವ್ಯಾಪಕ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿದೆ. ಮತ ಎಣಿಕಾ ಕೇಂದ್ರದ ಸುತ್ತಮುತ್ತ ಸಶಸ್ತ್ರ ಮೀಸಲು ಪಡೆ ಹಾಗೂ ಹೆಚ್ಚುವರಿ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ. ಸಿಸಿಟಿವಿ ಕ್ಯಾಮರಾಗಳ ಮೂಲಕ ನಿರಂತರ ಕಣ್ಗಾವಲು ವಹಿಸಿ, ನಿಗಾ ಇಡಲಾಗಿದೆ. ಮತ ಎಣಿಕೆ ಕೇಂದ್ರಕ್ಕೆ ಅನಧಿಕೃತ ಸಾರ್ವಜನಿಕರ ಪ್ರವೇಶವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

ಮತ ಎಣಿಕೆ ಕೇಂದ್ರದ ಒಳಗೆ ಮೊಬೈಲ್ ಫೋನ್, ಸ್ಮಾರ್ಟ್ ವಾಚ್ ಹಾಗೂ ಯಾವುದೇ ಎಲೆಕ್ಟ್ರಾನಿಕ್ ಉಪಕರಣ ಕೊಂಡೊಯ್ಯುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಿದೆ. ಮಾಧ್ಯಮದವರಿಗೆಪ್ರತ್ಯೇಕಮೀಡಿಯಾ ಸೆಂಟರ್‌ಸ್ಥಾಪಿಸಲಾಗಿದೆ. ಅಲ್ಲಿ ಇಂಟರ್ನೆಟ್, ಫಲಿತಾಂಶ ವೀಕ್ಷಣೆಗೆ ಸ್ಮಾರ್ಟ್ ಟಿವಿ ವ್ಯವಸ್ಥೆ ಮಾಡಲಾಗಿದೆ. ಚುನಾವಣೆಯ ಎಣಿಕೆ ಕಾರ್ಯಕ್ಕೆ ಸಂಪೂರ್ಣ ಸಿಸಿ ಟಿವಿ ಅಳವಡಿಸಲಾಗಿದೆ. ವೀಡಿಯೋಗ್ರಫಿ ಸಹ ಮಾಡಲಾಗುತ್ತದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ದಾವಣಗೆರೆ ತಹಸೀಲ್ದಾರ್ ಗುರುಬಸವರಾಜ, ಹರಿಹರ ತಾಲೂಕು ತಹಸೀಲ್ದಾರ ಸಂತೋಷ ಇತರರು ಇದ್ದರು.

> **ದಾವಣಗೆರೆ ದಕ್ಷಿಣ ಕ್ಷೇತ್ರ ಉಪ ಚುನಾವಣೆಯಲ್ಲಿ 85 ವರ್ಷ ಮೇಲ್ಪಟ್ಟ ಹಾಗೂ ವಿಶೇಷ ಮತದಾರರಿಂದ 217 ಮತಪತ್ರ ಮತ್ತು 10 ಅಂಚೆ ಮತಗಳನ್ನು ಸ್ವೀಕರಿಸಲಾಗಿದೆ. ಪ್ರತಿ ಸುತ್ತಿನ ಮತ ಎಣಿಕೆಯ ನಂತರ ಫಲಿತಾಂಶದ ವಿವರಗಳನ್ನು ಧ್ವನಿವರ್ಧಕಗಳ ಮೂಲಕ ಸಾರ್ವಜನಿಕರಿಗೆ ಹಾಗೂ ಆನ್‌ಲೈನ್ ಮೂಲಕ ಮಾಧ್ಯಮಗಳಿಗೆ ತಕ್ಷಣವೇ ಒದಗಿಸಲಾಗುವುದು. ಚುನಾವಣಾ ನೀತಿ ಸಂಹಿತೆ (MCC) ಜಾರಿಯಲ್ಲಿ ಇರುವುದರಿಂದ ಯಾವುದೇ ರೀತಿಯ ವಿಜಯೋತ್ಸವ ಅಥವಾ ಮೆರವಣಿಗೆಗಳನ್ನು ನಡೆಸುವಂತಿಲ್ಲ.**
>
> • **ಸಂತೋಷಕುಮಾರ** ಚುನಾವಣಾಧಿಕಾರಿ, ದಾವಣಗೆರೆ ದಕ್ಷಿಣ ಕ್ಷೇತ್ರ

# ಮಕ್ಕಳನ್ನು ಸೈನ್ಯಕ್ಕೆ ಸೇರಿಸಲು ಹಿಂದೇಟು ಸಲ್ಲದು

## ಚಿಕ್ಕೇರಳ್ಳಿಯಲ್ಲಿ ನಿವೃತ್ತ ಯೋಧ ಎಚ್.ರಮೇಶ್ ಸನ್ಮಾನ ಕಾರ್ಯಕ್ರಮದಲ್ಲಿ ಶಾಸಕ ಶಾಂತನಗೌಡ

• **ಕನ್ನಡಪ್ರಭ ವಾರ್ತೆ** ಹೊನ್ನಾಳಿ

ಸಾಮಾನ್ಯವಾಗಿ ಪೋಷಕರು ಮಕ್ಕಳು ಡಾಕ್ಟರ್, ಎಂಜಿನಿಯರ್, ಉನ್ನತ ಅಧಿಕಾರಿಗಳಾಗಬೇಕೆಂದು ಬಯಸುತ್ತಾರೆ. ದೇಶ ಕಾಯುವ ಸೈನ್ಯಕ್ಕೆ ಕಳಿಸಲು ಹಿಂದೇಟು ಹಾಕುತ್ತಾರೆ. ಹೆಣ್ಣು ಹೆತ್ತವರು ಕೂಡ ಸೈನಿಕರಿಗೆ ಹಾಗೂ ರೈತರಿಗೆ ತಮ್ಮ ಹೆಣ್ಣುಮಕ್ಕಳನ್ನು ಮದುವೆ ಮಾಡಿಕೊಡಲು ಮುಂದೆ ಬರುವುದಿಲ್ಲ. ಇಂಥ ಮನೋಭಾವ ಸಲ್ಲದು ಎಂದು ಶಾಸಕ ಡಿ.ಜಿ. ಶಾಂತನಗೌಡ ಹೇಳಿದರು.

22 ವರ್ಷ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿದ ಯೋಧ ಎಚ್.ರಮೇಶ್ (ಹವಾಲ್ದಾರ) ನಿವೃತ್ತಿ ಹೊಂದಿ ಶುಕ್ರವಾರ ಸ್ವಗ್ರಾಮ ಚಿಕ್ಕೇರಳ್ಳಿ ಗ್ರಾಮಕ್ಕೆ ಮರಳಿದ್ದ ಹಿನ್ನೆಲೆ ಸ್ವಗ್ರಾಮ ಸೇರಿದಂತೆ ಅಕ್ಕಪಕ್ಕದ ಗ್ರಾಮದವರು, ನಿವೃತ್ತ ಸೈನಿಕನ ಬಂಧುಗಳು, ಸ್ನೇಹಿತರು ರಾತ್ರಿ ಏರ್ಪಡಿಸಿದ್ದ ಅದ್ದೂರಿ ಸ್ವಾಗತ ಮತ್ತು ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಪ್ರತಿಯೊಬ್ಬ ಪುರುಷರ ಯಶಸ್ವಿ ಜೀವನದ ಹಿಂದೆ ಒಬ್ಬ ಮಹಿಳೆ ಇರುತ್ತಾರೆ ಎಂಬ ಮಾತಿದೆ. ಇದು ವಿಶೇಷವಾಗಿ ಸೈನಿಕರ ಧರ್ಮಪತ್ನಿ ಪಾತ್ರ ಹಿರಿದಾಗಿರುತ್ತೆ. ಇದಕ್ಕೆ ಉದಾಹರಣೆ ನಿವೃತ್ತ ಯೋಧ ರಮೇಶ್ ಪತ್ನಿ ರಂಜಿತಾ ಅವರ ತ್ಯಾಗ, ಸಹಕಾರ ಕೂಡ ಅವಿಸ್ಮರಣೀಯ ಎಂದು ಹೇಳಿದರು.

ಮಾಜಿಸಚಿವಎಂ.ಪಿ.ರೇಣುಕಾಚಾರ್ಯಮಾತನಾಡಿ, ನಮ್ಮ ಯೋಧ, ನಮ್ಮ ರೈತರು ನಮ್ಮ ಹೆಮ್ಮೆಯಾಗಿದ್ದಾರೆ. ಈ ಕಾರಣದಿಂದಲೇ ಮಾಜಿ ಪ್ರಧಾನಿ ದಿ. ಲಾಲ್ ಬಹದ್ದೂರ್‌ಶಾಸ್ತ್ರಿ ಅವರು ಜೈ ಜವಾನ್, ಜೈ ಕಿಸಾನ್



ಚಿಕ್ಕೇರಳ್ಳಿಯಲ್ಲಿ ನಿವೃತ್ತ ಸೈನಿಕ ಎಚ್.ರಮೇಶ್ ಸನ್ಮಾನ ಕಾರ್ಯಕ್ರಮವನ್ನು ಶಾಸಕ ಶಾಂತನಗೌಡ ಉದ್ಘಾಟಿಸಿದರು.

ಘೋಷವಾಕ್ಯ ದೇಶವಾಸಿಗಳಿಗೆ ನೀಡಿದ್ದಾರೆ. ದೇಶ, ಸಮಾಜಕ್ಕೆ ಯೋಧರು ಮತ್ತು ರೈತರು ಸಲ್ಲಿಸುತ್ತಿರುವ ಸೇವೆ ಕೇವಲ ಮಾತುಗಳಲ್ಲಿ ವರ್ಣಿಸಲು ಅಸಾಧ್ಯ ಎಂದರು.

ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಎಚ್.ಬಿ.ಮಂಜಪ್ಪ ಮಾತನಾಡಿ, ತಮ್ಮ ತಾಲೂಕಿನ 80 ಮನೆಗಳಿರುವ ಅತ್ಯಂತ ಚಿಕ್ಕಹಳ್ಳಿ ಚಿಕ್ಕೇರಳ್ಳಿಯಲ್ಲಿ ನಾಲ್ಕು ಜನ ಯೋಧರಾಗಿರುವುದು ಹೆಮ್ಮೆಯ ವಿಚಾರವಾಗಿದೆ ಎಂದರು. ಜಿಪಂ ಮಾಜಿ ಸದಸ್ಯ, ಡಿ.ಸಿ.ಸಿ. ಬ್ಯಾಂಕ್ ನಿರ್ದೇಶಕ, ಡಿ.ಜಿ.ವಿಶ್ವನಾಥ, ನೊಳಂಬ ಸಮಾಜದ ಜಿಲ್ಲಾಧ್ಯಕ್ಷ ಹಾಗೂ ಎನ್.ಎಸ್.ಎಸ್. ಸಂಯೋಜನಾಧಿಕಾರಿ ಡಾ. ಅಶೋಕ್ ಕುಮಾರ್‌ವಿ. ಪಾಳೇದ, ಮಾಜಿ ಸೈನಿಕ ಎಂ.ವಾಸಪ್ಪ ಮಾತನಾಡಿದರು.

ನಿವೃತ್ತ ಯೋಧ ಎಚ್.ರಮೇಶ್ (ಹವಾಲ್ದಾರ್) ಗ್ರಾಮಸ್ಥರ ಸನ್ಮಾನ ಸ್ವೀಕರಿಸಿ, ತಮ್ಮ ಸೈನಿಕ ಜೀವನದ ಅನುಭವಗಳನ್ನು ಹಂಚಿಕೊಂಡರು, ಮಾಜಿ ಸೈನಿಕರಾದ ಎಂ.ನಾಗರಾಜ್,ಎಸ್. ರವಿಕುಮಾರ್, ದಿವಂಗತ ಹೇಮಗೌಡ ಅವರ ಕುಟುಂಬದವರಿಗೆ ಸಹ ಗ್ರಾಮದವತಿಯಿಂದ ಸನ್ಮಾನಿಸಲಾಯಿತು.

ಡಿಸಿಸಿಬಿ ಮಾಜಿ ನಿರ್ದೇಶಕ ಕೆ.ಎಚ್. ಷಣ್ಮುಖಪ್ಪ, ರೈತ ಮುಖಂಡ ಎಚ್.ಕಡದಕಟ್ಟೆ ಜಗದೀಶ್, ರುದ್ರಪ್ಪ, ಸುಭಾಶ್, ಗ್ರಾ.ಪಂ. ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಗ್ರಾಮ ಮುಖಂಡರು, ಗ್ರಾಮಸ್ಥರು ಇದ್ದರು. ನಿವೃತ್ತ ಯೋಧ ರಮೇಶ್ ಅವರನ್ನು ಹೊನ್ನಾಳಿಯಿಂದ ತೆರೆದ ವಾಹನದಲ್ಲಿ ಮೆರವಣಿಗೆ ಮೂಲಕ ಕರೆತಂದಿದ್ದು ವಿಶೇಷವಾಗಿತ್ತು.

# ಇಂದು ಶುಷ್ಕ ದಿವಸ ಘೋಷಣೆ

ದಾವಣಗೆರೆ: ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಮತ ಎಣಿಕೆ ಕಾರ್ಯವು ಮೇ 4ರಂದು ನಡೆಯಲಿದ್ದು, ಮುಕ್ತ, ಶಾಂತಿಯುತ ಹಾಗೂ ನಿಷ್ಪಕ್ಷಪಾತವಾಗಿ ಮತ ಎಣಿಕೆ ಕಾರ್ಯ ನಡೆಸಲು ಪೂರಕವಾಗಿ ದಾವಣಗೆರೆ ತಾಲೂಕು ಮತ್ತು ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲ ಮದ್ಯದಂಗಡಿ, ಬಾರ್‌ಮತ್ತು ರೆಸ್ಟೋರೆಂಟ್, ಹೋಟೆಲ್, ಕ್ಲಬ್, ಡಾಬಾಗಳಲ್ಲಿ ಹಾಗೂ ಇನ್ನಿತರೆ ಸ್ಥಳಗಳಲ್ಲಿ ಮದ್ಯ ಮಾರಾಟ ಸಂಪೂರ್ಣ ನಿಷೇಧಿಸಿ, 'ಶುಷ್ಕ ದಿವಸ' ಎಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಆದೇಶ ಹೊರಡಿಸಿದ್ದಾರೆ.



**ಹಳೆ ಪಿ.ಬಿ. ರಸ್ತೆ ವಾಹನ ಸಂಚಾರ ಮಾರ್ಗ ಬದಲಾವಣೆ:** ದಾವಣಗೆರೆ: ದಾವಣಗೆರೆ ದಕ್ಷಿಣ ಕ್ಷೇತ್ರದ ಉಪ ಚುನಾವಣೆಯ ಮತ ಎಣಿಕೆ ಮೇ.4ರಂದು ನಗರದ ಹಳೆ ಪಿ.ಬಿ.ರಸ್ತೆಯ ಡಿಆರ್ ಆರ್‌ಶಾಲೆಯಲ್ಲಿ ನಡೆಯುವ ಹಿನ್ನೆಲೆಯಲ್ಲಿ ಸುಗಮ ಸಂಚಾರ ವ್ಯವಸ್ಥೆ ಮತ್ತು ಭದ್ರತೆ ದೃಷ್ಟಿಯಿಂದ ಮತ ಎಣಿಕಾ ಕೇಂದ್ರದ ಸುತ್ತಮುತ್ತ ವಾಹನ ಸಂಚಾರ ಮಾರ್ಗ ಬದಲಾವಣೆ ಮಾಡಿ ಜಿಲ್ಲಾ ಚುನಾವಣಾಧಿಕಾರಿ, ಡಿಸಿ ಆದೇಶ ಹೊರಡಿಸಿದ್ದಾರೆ.

**ಸಂಚಾರ ನಿಷೇಧ- ಪರ್ಯಾಯ ಮಾರ್ಗ:** ಮೇ 4ರ ಬೆಳಗ್ಗೆ 5ರಿಂದ ಸಂಜೆ 5ರವರೆಗೆ ಇಲ್ಲಿನ ಹಳೇ ಪಿ.ಬಿ. ರಸ್ತೆಯ ಎಪಿಎಂಸಿ ಫ್ಲೈಓವರ್‌ನಿಂದ ಡಿಸಿಎಂ ಅಂಡರ್‌ಬ್ರಿಡ್ಜ್‌ವರೆಗೆ ಎಲ್ಲ ಮಾದರಿ ವಾಹನ ಸಂಚಾರವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.

ಬೆಂಗಳೂರು, ಚಿತ್ರದುರ್ಗ ಮಾರ್ಗವಾಗಿ ಬಾಡಾ ಕ್ರಾಸ್ ಮೂಲಕ ದಾವಣಗೆರೆ ನಗರಕ್ಕೆ ಬರುವ ಕೆಎಸ್‌ಆರ್‌ಟಿಸಿ, ಖಾಸಗಿ ಬಸ್ಸುಗಳು ಮತ್ತು ಎಲ್ಲ ಭಾರೀ ಹಾಗೂ ಲಘು ಸರಕು ಸಾಗಣೆ ವಾಹನಗಳು ಇಲ್ಲಿನ ಎಪಿಎಂಸಿ ಎತ್ತಿನ ಸಂತೆ ಮುಖಾಂತರ ಎಪಿಎಂಸಿ ಒಳಗಿನ ರಸ್ತೆಯ ಮೂಲಕ ಆರ್.ಎಂ.ಸಿ. ಫ್ಲೈ ಓವರ್ ಮಾರ್ಗವಾಗಿ ಶ್ರೀ ಬಸವೇಶ್ವರ ದೇವಸ್ಥಾನ, ಗಣೇಶ ಹೋಟೆಲ್ ಸರ್ಕಲ್ ಹಾಗೂ ಈರುಳ್ಳಿ ಮಾರ್ಕೆಟ್ ಮುಖಾಂತರ ಹಳೇ ಪಿ.ಬಿ. ರಸ್ತೆ ತಲುಪಬೇಕು. ಭದ್ರತಾ ದೃಷ್ಟಿಯಿಂದ ಮತ ಎಣಿಕಾ ಕೇಂದ್ರಕ್ಕೆ ಬರುವಂತಹ ಚುನಾವಣಾ ಏಜೆಂಟರು ಹಾಗೂ ಮತ ಎಣಿಕಾ ಕೇಂದ್ರಕ್ಕೆ ಬರುವವರು ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳು ಮತ್ತು ಮೊಬೈಲ್‌ಗಳನ್ನು ತರುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಆದೇಶ ಹೊರಡಿಸಿದ್ದಾರೆ.

**ಬಿರುಬೇಸಗೆ ದಿನಗಳು** | ನೆಲ, ಜಲ, ಪರಿಸರ ವೃದ್ಧಿ- ಜಿಲ್ಲೆ ಕೆರೆಗಳ ಸಮರ್ಪಕ ನಿರ್ವಹಣೆ ಕುರಿತು ಡಿಸಿ ಕಚೇರಿ ಸಭಾಂಗಣದಲ್ಲಿ ಸಭೆ | ಮಳೆಕೊಯ್ಲು ಮುಖೇನ ಜಲಮರುಪೂರಣಕ್ಕೆ ಗಮನಹರಿಸಲು ತಾಕೀತು

# ಪ್ರತಿ ಹನಿಯೂ ಅಮೂಲ್ಯವಾಗಿದ್ದು, ನೀರನ್ನು ಹಿತಮಿತವಾಗಿ ಬಳಸಿ: ಡಿಸಿ ಸಲಹೆ

• **ಕನ್ನಡಪ್ರಭ ವಾರ್ತೆ** ದಾವಣಗೆರೆ

ಪ್ರತಿ ವರ್ಷದಂತೆ ವಾಡಿಕೆಗಿಂತ ಕಡಿಮೆ ಪ್ರಮಾಣದಲ್ಲಿ ಮಳೆ ಬರುತ್ತಿದೆ. ಅಲ್ಲದೇ, ತಾಪಮಾನ ಹೆಚ್ಚಳದಿಂದಾಗಿ ಕೆರೆ-ಕಟ್ಟೆ-ಕಾಲುವೆಗಳಲ್ಲಿ ನೀರಿನ ಪ್ರಮಾಣ ದಿನೇದಿನೇ ಕಡಿಮೆಯಾಗುತ್ತಿದೆ. ಅಂತರ್ಜಲದ ಮಟ್ಟವೂ ಕುಸಿಯುತ್ತಿರುವುದು ಆತಂಕದ ಸಂಗತಿಯಾಗಿದೆ. ಜಿಲ್ಲೆಯ ಜನರು ಜಲಮೂಲಗಳನ್ನು ಸಂರಕ್ಷಿಸಿಕೊಳ್ಳುವ, ಮಿತವಾಗಿ ಬಳಸುವ ಬಗ್ಗೆ ವಿಶೇಷ ಗಮನಹರಿಸಬೇಕಾದ ಅಗತ್ಯವಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ ಹೇಳಿದರು.

ಶನಿವಾರ ತಮ್ಮ ಕಚೇರಿ ಸಭಾಂಗಣದಲ್ಲಿ ನೆಲ-ಜಲ ಹಾಗೂ ಪರಿಸರವನ್ನು ವೃದ್ಧಿಸಲು ಹಾಗೂ ಸಂಪನ್ಮೂಲ ವ್ಯಕ್ತಿಗಳನ್ನು ಸೇರಿಸಿ, ಕಾರ್ಯೋನ್ಮುಖರಾಗುವ ಬಗ್ಗೆ ಮತ್ತು ಜಿಲ್ಲೆಯ ಕೆರೆಗಳ ಸಮರ್ಪಕ ನಿರ್ವಹಣೆ ಕುರಿತು ಏರ್ಪಡಿಸಲಾಗಿದ್ದ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಿಂದಿನ ಅನೇಕ ಸಭೆಗಳಲ್ಲಿ ಚರ್ಚಿಸಿದಂತೆ ಜಿಲ್ಲೆಯಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಇಂಗು ಗುಂಡಿಗಳ ನಿರ್ಮಾಣಗೊಳ್ಳದಿರುವುದು ಬೇಸರದ ಸಂಗತಿ. ಕೂಡಲೇ ಇಂಗುಗುಂಡಿಗಳ



ದಾವಣಗೆರೆಯಲ್ಲಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ ಅಧ್ಯಕ್ಷತೆಯಲ್ಲಿ ಜಿಲ್ಲೆಯ ಕೆರೆಗಳ ಸಮರ್ಪಕ ನಿರ್ವಹಣೆ ಕುರಿತ ಸಭೆ ನಡೆಯಿತು.

ನಿರ್ಮಾಣಕ್ಕೆ ಸಂಬಂಧಿಸಿದ ಇಲಾಖಾಧಿಕಾರಿಗಳು ಗಮನಹರಿಸುವಂತೆ ಸೂಚಿಸಿದರು.

ಜಿಲ್ಲೆಯಲ್ಲಿ ಬೀಳುವ ಮಳೆ ನೀರನ್ನು ಹಿಡಿದಿಟ್ಟು ಸದ್ಬಳಕೆ ಮಾಡಿಕೊಳ್ಳುವ, ಮಳೆ ನೀರು ಕೊಯ್ಲು ಮಾಡುವ ಮೂಲಕ ಜಲ ಮರುಪೂರಣಕ್ಕೆ ಗಮನಹರಿಸಬೇಕು. ವಿಶೇಷವಾಗಿ ನೂತನ ಕಟ್ಟಡಗಳ ನಿರ್ಮಾಣ ಸಂದರ್ಭದಲ್ಲಿ ಮಳೆನೀರು ಕೊಯ್ಲು ತಂತ್ರದ ಅಳವಡಿಕೆಗೆ ಮುಂದಾಗಬೇಕು. ಮುಂದಿನ ಒಂದು ವಾರದೊಳಗಾಗಿ ಅದಕ್ಕಾಗಿ ಯೋಜನೆ ರೂಪಿಸಿ, ಅನುಷ್ಠಾನಕ್ಕೆ ಕ್ರಮ ವಹಿಸುವಂತೆ ಹಾಗೂ ಸರ್ಕಾರಿ ಕಟ್ಟಡಗಳಿಂದಲೇ ಮೊದಲು ಆರಂಭಗೊಳ್ಳಬೇಕೆಂದು ಸಲಹೆ ನೀಡಿದರು.

ಪ್ರತಿ ಹನಿ ನೀರೂ ಅಮೂಲ್ಯ. ಅದನ್ನು ಮಿತವಾಗಿ ಬಳಸಲು ಎಲ್ಲರೂ ಗಮನಹರಿಸಬೇಕು. ನಗರದ ಕೆಲವು ಪ್ರದೇಶಗಳಲ್ಲಿನ ನಿವಾಸಿಗಳು ತಮ್ಮ ವಾಹನಗಳನ್ನು ತೊಳೆಯಲು ನೀರನ್ನು ಯಥೇಚ್ಛವಾಗಿ ಬಳಸುತ್ತಿರುವ ಬಗ್ಗೆ ಸಾರ್ವಜನಿಕ ವಲಯದಿಂದ ಸಾಕಷ್ಟು ದೂರುಗಳು ಕೇಳಿಬರುತ್ತಿವೆ. ಸ್ವತಃ ತಾವೇ ಖುದ್ದಾಗಿಯೂ ನೋಡಿದ್ದೇವೆ. ಮಹಾನಗರ ಪಾಲಿಕೆ ಪರಿಸರ ಅಧಿಕಾರಿಗಳು ನೀರನ್ನು ಅನಿಯಮಿತವಾಗಿ ಬಳಸುತ್ತಿರುವ ವ್ಯಕ್ತಿಗಳನ್ನು ಗುರುತಿಸಿ, ಸ್ಥಳ ತನಿಖೆ ಮಾಡಿ, ಅಂತಹ ವ್ಯಕ್ತಿಗಳಿಗೆ ನಿಯಮಾನುಸಾರ ದಂಡ ವಿಧಿಸಬೇಕು ಹಾಗೂ ಕಾನೂನು ಕ್ರಮಕ್ಕೆ ಶಿಫಾರಸು ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಮಹಾನಗರ ಪಾಲಿಕೆ ಅಧಿಕಾರಿಗಳು ಪ್ರತಿ ದಿನ ಬೆಳಗ್ಗೆ ವಾರ್ಡ್‌ಗೆ ಭೇಟಿ ನೀಡಿ ಪರಿಶೀಲಿಸಬೇಕು. ಅಲ್ಲಿನ ಸಮಸ್ಯೆಗಳಿಗೆ ಧ್ವನಿಯಾಗಬೇಕು. ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವರ್ತನೆ ಸಹಿಸಿಕೊಳ್ಳಲಾಗುವುದಿಲ್ಲ ಎಂದವರು ಎಚ್ಚರಿಸಿದರು.

ನಗರದಲ್ಲಿ ಮಾದರಿ ವಾರ್ಡ್‌ಗಳನ್ನು ನಿರ್ಮಾಣಗೊಳಿಸುವ ಆಶಯ ಹೊಂದಿದ್ದೇವೆ. ಒಂದು ವಾರ್ಡ್ ಅನ್ನು ಪ್ರಾಯೋಗಿಕವಾಗಿ ಆಯ್ಕೆ ಮಾಡಿಕೊಂಡು ಆ ವಾರ್ಡಿನಲ್ಲಿ ಪ್ರತಿ ದಿನ ಬೆಳಗ್ಗೆ 6 ರಿಂದ 7 ಗಂಟೆವರೆಗೆ ಒಂದೊಂದು ಬೀದಿಯಲ್ಲಿ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಸಾರ್ವಜನಿಕ ಸಭೆ ಆಯೋಜಿಸಲಾಗುವುದು. ಇದೇ ಸಂದರ್ಭದಲ್ಲಿ ಆ ವಾರ್ಡಿನಲ್ಲಿನ ಖಾಲಿ ನಿವೇಶನಗಳ ಮಾಲೀಕರು ತಮ್ಮ ನಿವೇಶನಗಳ ಸ್ವಚ್ಛಗೊಳಿಸಿ ಕೊಳ್ಳಬೇಕು. ತಪ್ಪಿದಲ್ಲಿ ಕ್ರಮಕ್ಕೆ ಶಿಫಾರಸು ಮಾಡಲಾಗುವುದು ಎಂದವರು ನುಡಿದರು.

ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿನ ಕೆರೆ-ಕಟ್ಟೆಗಳಿಂದ ನೀರನ್ನು ಅಕ್ರಮವಾಗಿ ಎತ್ತುವವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು. ಅರಣ್ಯ ಪ್ರದೇಶಗಳಲ್ಲಿ ಪಶು-ಪಕ್ಷಿಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗಿ ಪಕ್ಷಿಸಂಕುಲ ಅಳಿವಿನಂಚಿಗೆ ಬರಬಹುದು. ಆದ್ದರಿಂದ ಸಂಬಂಧಿಸಿದ ಅರಣ್ಯಾಧಿಕಾರಿಗಳು ಕೂಡಲೇ ಕಾರ್ಯಪ್ರವೃತ್ತರಾಗಿ ಅವುಗಳಿಗೆ ಕುಡಿಯುವ ನೀರನ್ನು ಒದಗಿಸಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಂಡು ವರದಿ ನೀಡುವಂತೆ ಅವರು ಸೂಚಿಸಿದರು. ಅರಣ್ಯ ಪ್ರದೇಶದಲ್ಲಿ ಗುಂಡಿ ಗಳನ್ನು ತೆಗೆದು, ನೀರು ಸಂಗ್ರಹಿಸುವುದರಿಂದ ಪ್ರಾಣಿಗಳಿಗೆ ಅನುಕೂಲವಾಗಲಿದೆ ಅಲ್ಲದೇ ಅಂತರ್ಜಲ ಮಟ್ಟದಲ್ಲಿಯೂ ಗಣನೀಯ ಏರಿಕೆ ಕಂಡುಬರಲಿದೆ ಎಂದವರು ಆಶಿಸಿದರು.

ಜಿಲ್ಲೆಯಲ್ಲಿ ನೂತನವಾಗಿ ಅನೇಕ ಬಡಾವಣೆಗಳ ಸೃಜನೆ ಕಾರ್ಯ ನಿರಂತರವಾಗಿದೆ. ಮುಂದಿನ ದಶಕಗಳ ಅವಧಿಯಲ್ಲಿ ಆ ಪ್ರದೇಶದ ನಿವಾಸಿಗಳಿಗೆ ಶುದ್ಧ ಕುಡಿಯುವ ನೀರನ್ನು ಪೂರೈಸಲು ಇರುವ ಸುಲಭ, ಸರಳ ಸಾಧ್ಯತೆಗಳ ಬಗ್ಗೆ ಪರಿಶೀಲಿಸುವಂತೆಯೂ, ಸಂಭಾವ್ಯ ಅವಕಾಶಗಳ ಬಗ್ಗೆ ಗಮನಹರಿಸುವಂತೆಯೂ ಅವರು ಸೂಚಿಸಿದರು. ಜಿಲ್ಲೆಯ ಉಪವಿಭಾಗಾಧಿಕಾರಿಗಳು ತಮ್ಮ ತಾಲೂಕುಗಳಲ್ಲಿ ಕಾಲಕಾಲಕ್ಕೆ ಸಭೆಗಳನ್ನು ಆಯೋಜಿಸಿ, ಅಧೀನ ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡುವಂತೆ ಅವರು ಸೂಚಿಸಿದರು.

ಅಧಿಕಾರಿಗಳ ಸಮಯೋಚಿತ ಸಲಹೆ-ಮಾರ್ಗದರ್ಶನದಿಂದ, ಪ್ರಾಮಾಣಿಕ ಕಾರ್ಯಗಳಿಂದಾಗಿ ಅಂತರ್ಜಲ ಮರುಪೂರಣಗೊಳಿಸುವುದು ಸಾಧ್ಯವಾಗಲಿದೆ. ಅಂತರ್ಜಲಮಟ್ಟ ಹೆಚ್ಚಿಸುವಲ್ಲಿ ಇದೊಂದು ಕ್ರಾಂತಿಕಾರಕ ಹೆಜ್ಜೆ ಆಗಿರಲಿದೆ. ಅಧಿಕಾರಿಗಳು ನೀರಿನ ಬಳಕೆ ಮತ್ತು ನಿರ್ವಹಣೆ ವಿಷಯವನ್ನು ಗಂಭೀರವಾಗಿ ಪರಿಗಣಿಸುವಂತೆ ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಬಲ್ಲೂರು ರವಿಕುಮಾರ, ಪ್ರೊ. ಕೆ.ಎಸ್.ಈಶ್ವರಪ್ಪ, ಉಪವಿಭಾಗಾಧಿಕಾರಿ ಚನ್ನಪ್ಪ, ಜಿ.ಪಂ. ಯುವಜನ ನಿರ್ದೇಶಕಿ ರೇಷ್ಮಾಕೌಸರ್, ಮಹಾನಗರಪಾಲಿಕೆ ಕಾರ್ಯಪಾಲಕ ಅಭಿಯಂತರ ಉದಯಕುಮಾರ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪಳನಿಸ್ವಾಮಿ, ನಾಗೇಂದ್ರ ಸೇರಿದಂತೆ ನೆಲ-ಜಲ ಸಂರಕ್ಷಣಾ ಸಮಿತಿಯ ಪದಾಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

> ### 11.03 ಮೀ.ಗೆ ಕುಸಿದ ಅಂತರ್ಜಲಮಟ್ಟ
>
> ಜಿಲ್ಲೆಯಲ್ಲಿ ಸ್ವತಂತ್ರ ಕೊಳವೆಬಾವಿ ಹೊಂದಿರುವ 140 ಶಾಲೆಗಳನ್ನು ಗುರುತಿಸಲಾಗಿದೆ. ಅಂತಹ ಶಾಲಾ ಆವರಣದಲ್ಲಿ ಮಳೆನೀರು ಕೊಯ್ಲು ತಂತ್ರಾಂಶ ಅಳವಡಿಸುವ ಬಗ್ಗೆ ಹಾಗೂ ಶಾಲಾ ಪರಿಸರದಲ್ಲಿ ಗಿಡಗಳನ್ನು ನೆಟ್ಟು, ಅವುಗಳನ್ನು ಪೋಷಿಸುವ ಬಗ್ಗೆಯೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ತ್ವರಿತ ಕ್ರಮ ಕೈಗೊಂಡು ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಸೂಚಿಸಿದರು. ಜಿಲ್ಲೆಯಲ್ಲಿ ಕಳೆದ ಸಾಲಿನಲ್ಲಿ 10.88 ಮೀ. ಇದ್ದ ಅಂತರ್ಜಲ ಮಟ್ಟ ಪ್ರಸಕ್ತ ಸಾಲಿನಲ್ಲಿ 11.03 ಮೀ.ಕ್ಕೆ ಕುಸಿದಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಕೆಳಕ್ಕೆ ಕುಸಿಯುವ ಸಾಧ್ಯತೆ ಇದೆ. ಇದು ಹೀಗೆ ಮುಂದುವರೆದಲ್ಲಿ ಗಂಭೀರ ಸ್ವರೂಪದ ನೀರಿನ ಸಮಸ್ಯೆ ಎದುರಿಸಬೇಕಾಗಬಹುದು ಎಂದವರು ಎಚ್ಚರಿಸಿದರು.

ನಾನು ಬಿಜೆಪಿಗೆ ಬರುವ ಯಾವುದೇ ಮಾತುಕತೆಗಳು ನಡೆದಿಲ್ಲ. ಹೊಸ ಪಕ್ಷ ಸ್ಥಾಪನೆ ಮಾಡಲು ಕುಳ್ಳುಮಲೆ ಗಣಪತಿ ದೇವಸ್ಥಾನದಲ್ಲಿ ಪೂಜೆ ನಡೆಸಿ ಹೊಸ ಪಕ್ಷ ಸ್ಥಾಪನೆ ಮಾಡುವ ಬಗ್ಗೆ ದೇವರಲ್ಲಿ ಕೇಳಿದಾಗ ಶುಭ ಸೂಚನೆ ಸಿಕ್ಕಿದೆ. ರಾಜ್ಯದ ಜನತೆಗೆ ಪರ್ಯಾಯ ಪಕ್ಷ ಅನಿವಾರ್ಯವಾಗಿದ್ದು, ನಾನು ರಾಜ್ಯದ ಯಾವುದೇ ಮೂಲೆಗೆ ಹೋದರೂ ಅಧಿಕ ಸಂಖ್ಯೆಯಲ್ಲಿ ಜನರು ಸೇರುತ್ತಿದ್ದಾರೆ.

• **ಬಸನಗೌಡ ಪಾಟೀಲ್ ಯತ್ನಾಳ್** ಶಾಸಕ.



## ಸುದ್ದಿ ಸಿಂಚನ

### ತಾಲೂಕು ಶ.ಸಾ.ಪ.ದಿಂದ ಕಾಯಕ ದಿನಾಚರಣೆ



**ಚನ್ನಗಿರಿ:** ತಾಲೂಕು ಶರಣ ಸಾಹಿತ್ಯ ಪರಿಷತ್ತು ವತಿಯಿಂದ ಕಾಯಕ ದಿನ ಕಾರ್ಯಕ್ರಮವನ್ನು ಇಲ್ಲಿನ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಕಾಯಕ ಜೀವಿಗಳಾದ ಅನಾಥ ಶವಗಳನ್ನು ಅಂತ್ಯಸಂಸ್ಕಾರ ಮಾಡಿಸುವಂತಹ ಜಾಕಿರ್ ಆಲಿ, ಮಡಿವಾಳ ಸಮುದಾಯದ ಮನು, ಪತ್ರಿಕೆ ವಿತರಕ ಬಸವರಾಜ್, ಹಡಪದ ಅಪ್ಪಣ್ಣ ಸಮಾಜದ ದಿನೇಶ್, ಹರಳಯ್ಯ ಸಮಾಜದ ರಂಗಪ್ಪ ಈ ಕಾಯಕ ಜೀವಿಗಳಿಗೆ ಪರಿಷತ್ ವತಿಯಿಂದ ಗೌರವಿಸಲಾಯಿತು. ಪರಿಷತ್ ಗೌರವ ಅಧ್ಯಕ್ಷ ಎಚ್.ಎಸ್.ಮಲ್ಲಿಕಾರ್ಜುನ್, ತಾಲೂಕು ಅಧ್ಯಕ್ಷ ಎಂ.ಎಸ್. ಮಲ್ಲೇಶಪ್ಪ, ಕಾರ್ಯದರ್ಶಿ ಜಿ.ಎಸ್. ಚಂದ್ರಪ್ಪ, ಖಜಾಂಚಿ ಶಿವಲಿಂಗಪ್ಪ, ಎನ್.ಎಸ್.ರಾಜಪ್ಪ, ಟಿ.ಮಂಜಪ್ಪ, ಸಿದ್ದಯ್ಯ, ಜಿ.ಎಸ್.ಶಂಕರಪ್ಪ, ನಾಗೇಂದ್ರಪ್ಪ ಮೊದಲಾದವರು ಹಾಜರಿದ್ದರು.

### ಬಿಸಿಲಿನ ತಾಪ: ಆಂಧ್ರದಲ್ಲಿ ಜಗಳೂರಿನ ಮಹಮ್ಮದ್ ಫಯಾಜ್ ಬಲಿ

**ಜಗಳೂರು:** ಪಟ್ಟಣದ ಮೇಕ ಸೂರ್ಯನಾರಾಯಣ ಬಡಾವಣೆಯ ನಿವಾಸಿ, ನಿವೃತ್ತ ಶಿಕ್ಷಕ ಇಬ್ರಾಹಿಂ ಸಾಬ್ ಪುತ್ರ ಎಂ.ಐ. ಮಹಮ್ಮದ್ ಫಯಾಜ್ (52) ಬಿಸಿಲಿನ ತಾಪಕ್ಕೆ ಬಸವಳಿದು ಶನಿವಾರ ಮಧ್ಯಾಹ್ನ 1.30ರ



ಸುಮಾರಿಗೆ ಆಂಧ್ರಪ್ರದೇಶ ರಾಜ್ಯದ ಅಧೋನಿ ಸಮೀಪದ ಗುಡಿಕಲ್‌ನಲ್ಲಿ ಮೃತಪಟ್ಟಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಆರೋಗ್ಯದಲ್ಲಿ ಯಾವುದೇ ಸಮಸ್ಯೆ ಇರಲಿಲ್ಲ. ಕುಟುಂಬದ ಸದಸ್ಯರೊಂದಿಗೆ ಭಕ್ತಿ-ಭಾವದೊಂದಿಗೆ ಉರುಸ್‌ನಲ್ಲಿ ಭಾಗವಹಿಸಿದ್ದರು. ಈ ವೇಳೆ ಬಿಸಿಲಿನ ತಾಪ ತಾಳಲಾರದೇ ಗುಡಿಕಲ್‌ನಲ್ಲೇ ಮೃತಪಟ್ಟಿದ್ದಾರೆ. ಸ್ಥಳೀಯರ ನೆರವಿನಿಂದ ಕುಟುಂಬದ ಸದಸ್ಯರು ಮಹಮ್ಮದ್ ಮೃತದೇಹವನ್ನು ಆಂಬ್ಯುಲೆನ್ಸ್ ಮೂಲಕ ಭಾನುವಾರ ತಡರಾತ್ರಿ ಪಟ್ಟಣಕ್ಕೆ ತಂದಿದ್ದಾರೆ. ಅನಂತರ ಅವರ ನಿವಾಸದಲ್ಲಿ ಅಂತಿಮ ದರ್ಶನ ಬಳಿಕ ಖಬರಸ್ಥಾನದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ತಿಳಿಸಲಾಗಿದೆ.

### ಕಸಾಪ ಸಂಸ್ಥಾಪನಾ ದಿನಾಚರಣೆ ನಾಳೆ

**ದಾವಣಗೆರೆ:** ತಾಲೂಕು ಕನ್ನಡ ಸಾಹಿತ್ಯ ಪರಿಷತ್‌ನಿಂದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನ ಕಾರ್ಯಕ್ರಮವನ್ನು ಮೇ 5ರಂದು ಇಲ್ಲಿನ ಎಂಸಿಸಿ ಬಿ ಬ್ಲಾಕ್‌ನಲ್ಲಿರುವ ಡೆಂಟಲ್ ಕಾಲೇಜು ರಸ್ತೆಯ ಸರ್ಕಾರಿ ಪಥಮ ದರ್ಜೆ ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಬೆಳಗ್ಗೆ 11 ಗಂಟೆಗೆ ಕಾಲೇಜಿನ ಪ್ರಾಚಾರ್ಯ ಬಸವರಾಜ ಸಿ. ತಹಸೀಲ್ದಾರ್ ಅಧ್ಯಕ್ಷತೆಯಲ್ಲಿ ಕಸಾಪ ಜಿಲ್ಲಾಧ್ಯಕ್ಷ ಬಿ.ವಾಮದೇವಪ್ಪ ಕಾರ್ಯಕ್ರಮ ಉದ್ಘಾಟಿಸುವರು. ಡಾ. ಎ.ಬಿ. ರಾಮಚಂದ್ರಪ್ಪ ಜನಸಾಮಾನ್ಯರತ್ತ ಕನ್ನಡ ಸಾಹಿತ್ಯ ಪರಿಷತ್ತು ವಿಷಯ ಕುರಿತು ಉಪನ್ಯಾಸ ನೀಡುವರು. ಉಪನ್ಯಾಸಕ ಡಾ. ಜಿ.ಇ.ಅಜ್ಜಪ್ಪ, ಕೆ.ಸಿ.ಲಿಂಗರಾಜ ಆನೆಕೊಂಡ, ಸತ್ಯಭಾಮ ಮಂಜುನಾಥ, ಷಡಕ್ಷರಪ್ಪ ಎಂ.ಬೇತೂರು, ಪರಮೇಶ್ವರಪ್ಪ ದಾಗಿನಕಟ್ಟೆ, ಪರಿಮಳ ಜಗದೀಶ, ಸುಮತಿ ಜಯಪ್ಪ ಇತರರು ಭಾಗವಹಿಸುವರು.

### ಚನ್ನಬಸಪ್ಪ ಬಡಾವಣೆ ರಸ್ತೆ ಶೀಘ್ರ ದುರಸ್ತಿಗೆ ಮನವಿ

**ದಾವಣಗೆರೆ:** ಇಲ್ಲಿನ ಪೈಲ್ವಾನ್ ಚನ್ನಬಸಪ್ಪ ಬಡಾವಣೆಯ 60 ಅಡಿ ರಸ್ತೆಯನ್ನು 3 ತಿಂಗಳ ಹಿಂದೇ ಕಿತ್ತಿದ್ದಾರೆ. ಆದರೆ, ಇದುವರೆಗೂ ರಸ್ತೆ ಸರಿಪಡಿಸಿಲ್ಲ. ಈ ಕೂಡಲೇ ರಸ್ತೆ ದುರಸ್ತಿಗೆ ಕ್ರಮ ಕೈಗೊಳ್ಳಬೇಕೆಂದು ಪೈಲ್ವಾನ್ ಚನ್ನಬಸಪ್ಪ ಬಡಾವಣೆಯ ನಾಗರೀಕರು ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸಿದ್ದಾರೆ. ರಸ್ತೆ ಅವ್ಯವಸ್ಥೆಯಿಂದ ಹಿರಿಯರು, ವಿದ್ಯಾರ್ಥಿಗಳು, ಮಹಿಳೆಯರಿಗೆ ಓಡಾಡಲು ಬಹಳ ತೊಂದರೆಯಾಗುತ್ತಿದೆ. ಈ ಬಡಾವಣೆಯ ಸಮೀಪದಲ್ಲಿ ಮಂಜುನಾಥ ಬಡಾವಣೆ, ಬಾದಾಮಿ ಬಡಾವಣೆ, ಎಸ್‌ಎಸ್‌ಎಂ ಶಾಲೆ ಇದ್ದು, ಅನೇಕ ಕಟ್ಟಡಗಳನ್ನು ಕಟ್ಟುತ್ತಿದ್ದಾರೆ. ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆ ಆಗುತ್ತಿದೆ. ಸದರಿ ಬಡಾವಣೆಗಳಿಗೆ ಸಂಪರ್ಕಿಸುವ ರಸ್ತೆ ಇದಾಗಿದೆ. ಈ ಕೂಡಲೇ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದು ರಸ್ತೆ ಸರಿಪಡಿಸಿಕೊಡಬೇಕೆಂದು ನಾಗರೀಕರು ಮನವಿ ಸಲ್ಲಿಸಿದ್ದಾರೆ.






ದಾವಣಗೆರೆ ದಕ್ಷಿಣ ವಿಧಾನಸಭಾ ಉಪ ಚುನಾವಣೆ ಮತ ಎಣಿಕೆ ಕೇಂದ್ರಕ್ಕೆ ಭಾನುವಾರ ಜಿಲ್ಲಾಧಿಕಾರಿ, ಜಿಲ್ಲಾ ಚುನಾವಣಾಧಿಕಾರಿಗಳಾದ ಜಿ.ಎಂ. ಗಂಗಾಧರ ಸ್ವಾಮಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ, ಚುನಾವಣಾಧಿಕಾರಿ ಸಂತೋಷ ಕುಮಾರ, ತಹಸೀಲ್ದಾರ್ ಗುರುಬಸವರಾಜ, ಪಾಲಿಕೆ ಕಾರ್ಯಪಾಲಕ ಅಭಿಯಂತರ ಉದಯಕುಮಾರ ಇದ್ದರು.



ದಾವಣಗೆರೆಯ ಮತ ಎಣಿಕೆ ಕೇಂದ್ರದಲ್ಲಿ ಮಾಧ್ಯಮ ಕೇಂದ್ರವನ್ನು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ ಪರಿಶೀಲಿಸಿದರು. ಚುನಾವಣಾಧಿಕಾರಿ ಸಂತೋಷ ಕುಮಾರ ಇತರರು ಇದ್ದರು.

# ಸಮರ್ಥ ಆಯ್ಕೆಯೋ?, ಶ್ರೀನಿವಾಸ ಕಲ್ಯಾಣವೋ?

## ಎಸ್‌ಡಿಪಿಐ ಅಭ್ಯರ್ಥಿ ಅಫ್ಸರ್ ಸ್ಪರ್ಧೆಯಿಂದ 'ಕೊಡ್ಲಿ ಪೆಟ್ಟು' ಯಾರಿಗೆ? | ಇಬ್ರಾಹಿಂ ಬೆಂಬಲಿತ 'ವಜ್ರ'ದ ಅಭ್ಯರ್ಥಿ ಜಾದೂ ನಡೆದಿದೆಯಾ?

• **ನಾಗರಾಜ ಎಸ್. ಬಡದಾಳ್**
**ಕನ್ನಡಪ್ರಭ ವಾರ್ತೆ** ದಾವಣಗೆರೆ

ಕ್ಷೇತ್ರ ಅಸ್ತಿತ್ವಕ್ಕೆ ಬಂದಾಗಿನಿಂದ ಕಾಂಗ್ರೆಸ್ಸಿನ ಭದ್ರಕೋಟೆ ಯೆಂದೇ ಪ್ರಸಿದ್ಧಿ ಪಡೆದಿದ್ದ, ಹಿರಿಯ ಶಾಸಕರಾಗಿದ್ದ ಡಾ.ಶಾಮನೂರು ಶಿವಶಂಕರಪ್ಪ ಇಲ್ಲದ ಮೊದಲ ಉಪ ಚುನಾವಣೆಗೆ ಕಾರಣವಾದ ದಾವಣಗೆರೆ ದಕ್ಷಿಣ ಕ್ಷೇತ್ರದ ಫಲಿತಾಂಶಕ್ಕೆ ಕ್ಷಣಗಣನೆ ಶುರುವಾಗಿದ್ದು, ಈ ಬೆನ್ನಲ್ಲೇ ಬಾಜಿ ಕಟ್ಟಿ ಮೀಸೆ ತಿರುವವರ ಸಂಖ್ಯೆಯೂ ಕ್ಷೇತ್ರ, ಜಿಲ್ಲೆಯಲ್ಲಿ ಕಡಿಮೆಯೇನಿಲ್ಲ!

ದಾವಣಗೆರೆ ಲೋಕಸಭಾ ಕ್ಷೇತ್ರದ ಬಹುತೇಕ ವಿಧಾನಸಭಾ ಕ್ಷೇತ್ರಗಳು ಒಮ್ಮೆ ಕಾಂಗ್ರೆಸ್, ಇನ್ನೊಮ್ಮೆ ಬಿಜೆಪಿ ಒಲಿದಿವೆ. ಸಾಂಪ್ರಾದಾಯಿಕ ವೈರಿಗಳಾದ ಕಾಂಗ್ರೆಸ್-ಬಿಜೆಪಿ ಮಧ್ಯೆ ಸ್ಪರ್ಧೆ ಇದ್ದರೆ, ಹರಿಹರ ಕ್ಷೇತ್ರ ಕಾಂಗ್ರೆಸ್- ಬಿಜೆಪಿ- ಜೆಡಿಎಸ್ ತ್ರಿಕೋನ ಸ್ಪರ್ಧೆಗೆ ಹೆಸರಾಗಿದೆ. ಆದರೆ, ದಾವಣಗೆರೆ ದಕ್ಷಿಣ ಕ್ಷೇತ್ರ ಮಾತ್ರ ಶಾಮನೂರು ಶಿವಶಂಕರಪ್ಪ ಅವರಿಂದಾಗಿ ಕಾಂಗ್ರೆಸ್ಸಿನ ಭದ್ರಕೋಟೆಯಾಗಿ, ಬಿಜೆಪಿ ಪಾಲಿಗೆ ಕಬ್ಬಿಣದ ಕಡಲೆಯಾಗಿತ್ತು.

ಬದಲಾದ ಕಾಲಘಟ್ಟದಲ್ಲಿ ಕಾಂಗ್ರೆಸ್ಸಿನ ಭದ್ರಕೋಟೆಯಾಗಿ ಕಾಯ್ದುಕೊಂಡಿದ್ದ ಅಲ್ಪಸಂಖ್ಯಾತ ಮುಸ್ಲಿಮರು ಮೊದಲ ಸಲ ಟಿಕೆಟ್ ಗೆದ್ಧ್ವನಿ ಎತ್ತಿದ್ದರಿಂದ ಆ ಪಕ್ಷದಲ್ಲೂ ಎರಡು ಗುಂಪುಗಳಾಗಿ, ಸಮುದಾಯದಲ್ಲೂ 3-4 ಗುಂಪುಗಳಾಗಿದ್ದರಿಂದ ಉಪ ಚುನಾವಣೆಯಲ್ಲಿ ಮತಗಳ ವಿಭಜನೆಯಿಂದಾಗಿ ಕಾಂಗ್ರೆಸ್ಸಿಗೆ ಒಂದಿಷ್ಟು ತಲೆನೋವು ತಂದಿದೆ. ಲೋಕಸಭೆ ಚುನಾವಣೆ ವೇಳೆ ಮನೆಯೊಂದು, ಹಲವು ಬಾಗಿಲಂತಾಗಿದ್ದ ಬಿಜೆಪಿಗೆ ಬಂದಿದ್ದ ಸ್ಥಿತಿಯನ್ನೇ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಎದುರಿಸಿದ್ದು ಸೋಜಿಗ. ಇದರ ಜೊತೆಗೆ ಎಸ್‌ಡಿಪಿಐ, ಪಕ್ಷೇತರ ಅಭ್ಯರ್ಥಿ ಸಹ ಕಾಂಗ್ರೆಸ್ಸಿಗೆ ತಲೆನೋವು ತಂದಿದ್ದಾರೆ.

**ದಕ್ಷಿಣ ಕ್ಷೇತ್ರ ದಂಗಲ್**

### ಡಿಸ್ಕೌಂಟ್, ಬೆಟ್ಟಿಂಗ್ ಭರಾಟೆ!

ದಕ್ಷಿಣ ಕ್ಷೇತ್ರದಲ್ಲಿ ಯಾರು ಗೆಲ್ಲುತ್ತಾರೆಂಬ ಬಗ್ಗೆ ಎರಡೂ ಪ್ರಮುಖ ಪಕ್ಷಗಳು, ಅಭ್ಯರ್ಥಿಗಳ ಬೆಂಬಲಿಗರು ಬಾಜಿ ಕಟ್ಟಿದ್ದಾರೆಂಬ ಮಾತುಕೇಳಿ ಬರುತ್ತಿವೆ. ಈ ಉಪ ಚುನಾವಣೆಯಲ್ಲಿ ಬಾಜಿ ಕಟ್ಟಿ ಮೀಸೆ ತಿರುವುವಂತಹ ಧೈರ್ಯ ಯಾರೂ ಮಾಡಿಲ್ಲ. ಆದರೂ, ಕೆಲವರು ತಮ್ಮ ನಾಯಕರ ಮೆಚ್ಚಿಸಲು, ಗಮನ ತಮ್ಮೆಡೆ ಸೆಳೆಯುವುದಕ್ಕೇನೋ ಎಂಬಂತೆ ತಮ್ಮ ಊರಿನಲ್ಲಿ ಅಷ್ಟು ಲಕ್ಷ ಬೆಟ್ ಕಟ್ಟಿದ್ದಾರೆ, ಇಷ್ಟು ಹೊಲ ಪಣಕ್ಕೆ ಇಟ್ಟಿದ್ದಾರೆ ಎಂದೆಲ್ಲಾ ಹೇಳುತ್ತಿದ್ದಾರೆ. ಮತ್ತೆ ಕೆಲವರು ಡಿಸ್ಕೌಂಟ್ ಕೇಳಿ, ತಡರಾತ್ರಿವರೆಗೂ ಕಾಯುತ್ತೇವೆಂಬ ಮಾತುಗಳನ್ನು ಹೇಳಿರುವುದು ಹಳೆ ಭಾಗದಲ್ಲಿ, ಗ್ರಾಮೀಣ ಪ್ರದೇಶದಲ್ಲೂ ಕೇಳಿಬರುತ್ತಿದೆ. ಆದರೆ, ತಮ್ಮ ಅಭ್ಯರ್ಥಿಯೇ ಗೆಲ್ಲುತ್ತಾನೆಂದು ಹೇಳಿಕೊಳ್ಳುವಂತಹ ಧೈರ್ಯ ಯಾವುದೇ ಪಕ್ಷ ತೋರದಿದ್ದರೂ, ದಾವಣಗೆರೆ ದಕ್ಷಿಣ ಕ್ಷೇತ್ರ ಫಲಿತಾಂಶ ಕೆಲವೇ ಸಾವಿರ ಮತಗಳ ಅಂತರದ್ದೆಂಬುದು ಸ್ವತಃ ಉಭಯ ಪಕ್ಷಗಳಿಗೂ ಗೊತ್ತಿರುವ ಸತ್ಯವಾಗಿದೆ.

### ದಕ್ಷಿಣ ಕ್ಷೇತ್ರದ ಒಟ್ಟು ಮತದಾನ ಪ್ರಮಾಣ

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಏ.9ರಂದು ನಡೆದ ಉಪ ಚುನಾವಣೆಯಲ್ಲಿ ಶೇ.68.55ರಷ್ಟು ಮತದಾನವಾಗಿತ್ತು. ಈ ಪೈಕಿ ಗ್ರಾಮೀಣ ಪ್ರದೇಶದಲ್ಲಿ ಶೇ.84.36ರಷ್ಟು ಹಾಗೂ ನಗರ ಪ್ರದೇಶದಲ್ಲಿ ಶೇ.65.59ರಷ್ಟು ಮತದಾನವಾಗಿತ್ತು. ಇದೀಗ ಮೇ 4ರಂದು ದಾವಣಗೆರೆ ಡಿಆರ್‌ಆರ್‌ಶಾಲೆಯ ಮತ ಎಣಿಕಾ ಕೇಂದ್ರದಲ್ಲಿ ಕ್ಷೇತ್ರ ಉಪ ಚುನಾವಣೆಯ ಮತ ಎಣಿಕೆ ಕಾರ್ಯ ನಡೆಯಲಿದ್ದು, ಇಡೀ ಜಿಲ್ಲೆ, ರಾಜ್ಯದ ಗಮನವನ್ನು ದಿವಂಗತ ಶಾಮನೂರು ಶಿವಶಂಕರಪ್ಪ ಪ್ರತಿನಿಧಿಸುತ್ತಿದ್ದ ಕ್ಷೇತ್ರ ಸೆಳೆದಿದೆ.





ಉಪ ಚುನಾವಣೆ ಕಾರಣಕ್ಕೆ ಮುಸ್ಲಿಮರಿಗೆ, ಅಹಿಂದ ವರ್ಗಕ್ಕೆ ಟಿಕೆಟ್ ಕೊಡುವಂತೆ ಕೇಳಿದ್ದ ಕೆ. ಅಬ್ದುಲ್ ಜಬ್ಬಾರ್ ತಲೆದಂಡವಾಗಿದೆ. ಇನ್ನೂ ಆರು ಜನರನ್ನು ಕಾಂಗ್ರೆಸ್ ಜಿಲ್ಲಾ ಸಮಿತಿಯೇ ಉಚ್ಚಾಟನೆಗೆ ಕೆಪಿಸಿಸಿ ಶಿಸ್ತು ಸಮಿತಿಗೆ ಶಿಫಾರಸು ಮಾಡಿದೆ. ಉಪ ಚುನಾವಣೆ ಕಾಂಗ್ರೆಸ್ಸಿಗೆ ಪ್ರತಿಷ್ಠೆಯದ್ದಾಗಿದ್ದು, ಬಿಜೆಪಿ ಇಲ್ಲಿ ಫಲಿತಾಂಶದಿಂದ ಗಳಿಸುವುದು, ಕಳೆದುಕೊಳ್ಳುವುದೇನೂ ಇಲ್ಲ. ಆದರೆ, ದಿಕ್ಕಿಗೆ ಒಬ್ಬರಂತಾಗಿದ್ದ ಬಿಜೆಪಿ ನಾಯಕರಿಗೆ ಒಗ್ಗಟ್ಟಿನ ಮಂತ್ರ ಜಪಿಸುವಂತೆ ಮಾಡಿದ್ದು ಈ ಉಪ ಚುನಾವಣೆ. 2028ರ ಸಾರ್ವತ್ರಿಕ ಚುನಾವಣೆ ಗೆದ್ದರೆ ಬಿಜೆಪಿ ಶಕ್ತಿ ಉದ್ದೀಪನಗೊಳಿಸುವುದು ಸತ್ಯ.

ದಕ್ಷಿಣಕ್ಷೇತ್ರದಲ್ಲಿ ಇದೇ ಮೊದಲ ಬಾರಿಗೆ ಎರಡೂ ಪ್ರಮುಖ ಪಕ್ಷಗಳಿಂದ ಸ್ಪರ್ಧಿಸಿರುವುದು ಹೊಸ ಮುಖಗಳೇ. ಕಾಂಗ್ರೆಸ್ಸಿನ ಸಮರ್ಥ ಎಂ. ಶಾಮನೂರುಗೆ ರಾಜಕೀಯ ಹೊಸದಲ್ಲ. ಆದರೆ, ಅಭ್ಯರ್ಥಿಯಾಗಿ ಕಣಕ್ಕೆ ಇಳಿದಿರುವುದು ಚೊಚ್ಚಲ ಪ್ರಯತ್ನ. ಅದೇ ರೀತಿ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ಟಿ. ದಾಸಕರಿಯಪ್ಪಗೂ ರಾಜಕಾರಣ ಹೊಸದಲ್ಲ. ಚುನಾವಣೆ ಕಣಕ್ಕೆ ಇಳಿದಿದ್ದು ಇದೇ ಮೊದಲು. ಹಾಗಾಗಿ, ಸಾಂಪ್ರಾದಾಯಿಕ ವೈರಿಗಳಾದ ಕಾಂಗ್ರೆಸ್-ಬಿಜೆಪಿ ಮಧ್ಯೆ ನೇರ ಸ್ಪರ್ಧೆ ಇದ್ದು, ಎಸ್‌ಡಿಪಿಐ ಅಭ್ಯರ್ಥಿ, ಕೇಂದ್ರ ಮಾಜಿ ಸಚಿವ ಸಿ.ಎಂ. ಇಬ್ರಾಹಿಂ ಬೆಂಬಲಿತ ಪಕ್ಷೇತರ ಅಭ್ಯರ್ಥಿ, ಮುಸ್ಲಿಂ ಅಭ್ಯರ್ಥಿಗಳು ಪಡೆಯುವ ಮತ ಫಲಿತಾಂಶದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಹೆಚ್ಚಾಗಿದೆ.

ಮೇಲ್ನೋಟಕ್ಕೆ ಕಾಂಗ್ರೆಸ್- ಬಿಜೆಪಿ ಮಧ್ಯೆ ಇದೇ ಮೊದಲ ಬಾರಿಗೆ ಸಮಾನ ಪೈಪೋಟಿಯೆಂಬ ಮಾತು ಕೇಳಿಬರುತ್ತಿವೆ. ಈ ಹಿಂದೆ ಶಾಮನೂರು ಶಿವಶಂಕರಪ್ಪ-ಯಶವಂತ ರಾವ್ ಜಾಧವ್ ಸ್ಪರ್ಧೆ ಮಾಡಿದ್ದಾಗ ಹೇಗೆ ಕೆಲವೇ ಸಾವಿರಗಳ ಮತಗಳ ಅಂತರದಲ್ಲಿ ಫಲಿತಾಂಶ ಬಂದಿತ್ತೋ, ಈ ಉಪ ಚುನಾವಣೆಯಲ್ಲೂ ಅಂತಹದ್ದೇ ಸಾಧ್ಯತೆ ಇವೆ ಎನ್ನಲಾಗಿದೆ. ಉಭಯ ಪಕ್ಷಗಳ ಪೈಕಿ ಯಾರ ಗೆಲುವು ಎಂಬುದನ್ನು ಎಸ್‌ಡಿಪಿಐ, ಪಕ್ಷೇತರ ಮುಸ್ಲಿಂ ಅಭ್ಯರ್ಥಿಗಳು ಪಡೆದ ಮತಗಳು ನಿರ್ಣಯಿಸುವ ಸಾಧ್ಯತೆ ಹೆಚ್ಚು. ಕಾಂಗ್ರೆಸ್ಸಿಗೆ ಹೇಗೆ ಕೆಲವರಿಂದ ವಿರೋಧ ಕಂಡು ಬಂದಿತ್ತೋ ಅಂತಹದ್ದು ಮತ ಚಲಾವಣೆ ವೇಳೆ ಇರಲಿಲ್ಲ. ಕಾಂಗ್ರೆಸ್ಸಿಗೆ ಅಲ್ಪಸಂಖ್ಯಾತರೂ ಸೇರಿ ಎಲ್ಲರೂ ಕೈ ಹಿಡಿದಿದ್ದಾರೆಂಬುದು ಕಾಂಗ್ರೆಸ್ಸಿನವರ ಹೇಳಿಕೆ.

ಮತ್ತೊಂದು ಕಡೆ ಬಿಜೆಪಿ ಕಾಂಗ್ರೆಸ್ ಪಾಳೆಯದ ಅತೃಪ್ತಿ, ಮುಸ್ಲಿಂ ಸಮುದಾಯದ ಮುನಿಸಿನ ಲಾಭ ತನಗೆ ಆಗಬಹುದೆಂಬ ನಿರೀಕ್ಷೆಯಲ್ಲಿದೆ. ಈ ಚುನಾವಣೆಯಲ್ಲಿ ಅಭ್ಯರ್ಥಿಗಳ ಜಾತಿ ಆಟವೂ ಜೋರಾಗಿಯೇ ನಡೆದಿರುವುದು ಕಂಡುಬರುತ್ತಿದೆ. ಎರಡೂ ಅಭ್ಯರ್ಥಿಗಳ ಪರವಾಗಿ ಆಯಾ ಸಮುದಾಯದ ಜಾತಿ ಮತಗಳು, ಅಹಿಂದ ವರ್ಗಗಳ ಮತಗಳು ಸಿಕ್ಕಿವೆಯೆಂದರೆ, ಮುಸ್ಲಿಮರ ಮತ ವಿಭಜನೆ ಆಗಿದೆಯೆಂಬ ವಾದವಿದೆ. ಸದ್ಯಕ್ಕೆ ದಾವಣಗೆರೆ ದಕ್ಷಿಣ ಕ್ಷೇತ್ರ ಫಲಿತಾಂಶವು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಅವರ ಪ್ರತಿಷ್ಠೆಯದ್ದಾಗಿದೆ. ಅದೇ ರೀತಿ ಕೇಂದ್ರದ ಮಾಜಿ ಸಚಿವ ಜಿ.ಎಂ. ಸಿದ್ದೇಶ್ವರ, ಮಾಜಿ ಸಚಿವರಾದ ಎಸ್.ಎ.ರವೀಂದ್ರನಾಥ, ಎಂ.ಪಿ.ರೇಣುಕಾಚಾರ್ಯ ಅವರ ಮಧ್ಯೆ ಇದ್ದ ವೈಮನಸ್ಸು ಮರೆಯಾಗಲು ಬಿಜೆಪಿ ಇಲ್ಲಿ ಗೆಲುವು ಸಾಧಿಸಲೇಬೇಕಿದೆ.

ಚಿತ್ರದುರ್ಗದಲ್ಲಿ ಮೇ 9ರಂದು ನಡೆಯುವ ಬಿಎಸ್‌ವೈ ಅಭಿಮಾನೋತ್ಸವ ಮತ್ತಷ್ಟು ರಂಗೇರಬೇಕೆಂದರೆ ದಾವಣಗೆರೆ ದಕ್ಷಿಣ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ ಗೆಲ್ಲಬೇಕಿದೆ. ಬಿಜೆಪಿಗೆ ಸದಾ ಕಬ್ಬಿಣದ ಕಡಲೆಯಾಗಿದ್ದು, ದಕ್ಷಿಣದಲ್ಲಿ ಸೋಲಿಲ್ಲದ ಸರದಾರನಾಗಿ ಪ್ರತಿನಿಧಿಸುತ್ತಿದ್ದ ಶಾಮನೂರು ಶಿವಶಂಕರಪ್ಪ ಇಲ್ಲದ ಮೊದಲ ಚುನಾವಣೆಯಲ್ಲಾದರೂ ದಕ್ಷಿಣ ಕ್ಷೇತ್ರದಲ್ಲಿ ಕಮಲ ಅರಳಿಸುವ ಬಿಜೆಪಿ ದಶಕಗಳ ಕನಸಿಗೆ ಇಲ್ಲಿ ಸಾವಿರಾರು ಕಾರ್ಯ ಕರ್ತರೇ ಶಕ್ತಿಯಾಗಿದ್ದಾರೆ. ಕ್ಷೇತ್ರದ ಮತದಾರರು ಯಾರ ಮುಡಿಗೆ ವಿಜಯಮಾಲೆ ಹಾಕಿದ್ದಾರೆಂಬುದಕ್ಕೆ ಇನ್ನು ಕೆಲ ತಾಸುಗಳಲ್ಲೇ ಸ್ಪಷ್ಟ ಚಿತ್ರಣವೂ ಸಿಗಲಿದೆ.

# ಅಭಿಮಾನೋತ್ಸವ ಯಡಿಯೂರಪ್ಪ ಕುಟುಂಬದ ಕಾರ್ಯಕ್ರಮ: ಯತ್ನಾಳ

## ಹೊಸ ಪಕ್ಷ ಸ್ಥಾಪಿಸಲು ಕುಳ್ಳುಮಲೆ ಗಣಪತಿ ದೇವರಿಂದ ಶುಭ ಸೂಚನೆ

• **ಕನ್ನಡಪ್ರಭ ವಾರ್ತೆ** ಚನ್ನಗಿರಿ

ಮೇ9 ರಂದು ಚಿತ್ರದುರ್ಗದಲ್ಲಿ ನಡೆಯುತ್ತಿರುವ ಅಭಿಮಾನೋತ್ಸವ ಕಾರ್ಯಕ್ರಮವು ಯಡಿಯೂರಪ್ಪ ಮತ್ತು ಅವರ ಮಗ ವಿಜಯೇಂದ್ರ ಅವರಿಗೆ ಬಿಜೆಪಿ ಜವಾಬ್ದಾರಿ ಕೊಡುವ ಕಾರಣದಿಂದ ನಡೆಸುತ್ತಿದ್ದಾರೆ. ಇದು ಯಡಿಯೂರಪ್ಪನವರ ಕುಟುಂಬದ ಕಾರ್ಯಕ್ರಮವಾಗಿದೆ ಎಂದು ವಿಜಯಪುರ ನಗರ ಕ್ಷೇತ್ರದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.

ಶನಿವಾರ ಪಟ್ಟಣದಲ್ಲಿ ಖಾಸಗಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು. ರಾಜ್ಯದಲ್ಲಿ ಎಲ್ಲ ನಾಯಕರು ಸೇರಿ ಬಿಜೆಪಿಯನ್ನು ಕಟ್ಟಿದ್ದು. ಯಡಿಯೂರಪ್ಪ ಒಬ್ಬರಿಂದಲೇ ಬಿಜೆಪಿ ಎಂಬ ಭ್ರಮೆಯಿಂದ ಹೊರಬರಬೇಕು ಎಂದರು.

ನಾನು ಬಿಜೆಪಿಗೆ ಬರುವ ಯಾವುದೇ ಮಾತುಕತೆಗಳು ನಡೆದಿಲ್ಲ. ಹೊಸ ಪಕ್ಷವನ್ನು ಸ್ಥಾಪನೆ ಮಾಡಲು ಕುಳ್ಳುಮಲೆ ಗಣಪತಿ ದೇವಸ್ಥಾನದಲ್ಲಿ ಪೂಜೆ ನಡೆಸಿ ಹೊಸ ಪಕ್ಷವನ್ನು ಸ್ಥಾಪನೆ ಮಾಡುವ ಬಗ್ಗೆ ದೇವರಲ್ಲಿ ಕೇಳಿದಾಗ ಶುಭ ಸೂಚನೆ ಸಿಕ್ಕಿದೆ. ರಾಜ್ಯದ ಜನತೆಗೆ ಪರ್ಯಾಯ ಪಕ್ಷ ಅನಿವಾರ್ಯವಾಗಿದ್ದು, ನಾನು ರಾಜ್ಯದ ಯಾವುದೇ ಮೂಲೆಗೆ ಹೋದರೂ ಅಧಿಕ ಸಂಖ್ಯೆಯಲ್ಲಿ ಜನರು ಸೇರುತ್ತಿದ್ದಾರೆ. ಪ್ರಾಮಾಣಿಕರಿಗೆ, ಭ್ರಷ್ಟಾಚಾರ ರಹಿತರಿಗೆ ಜನರು ಮನ್ನಣೆ ನೀಡಲಿದ್ದಾರೆ ಎಂದರು.

ಜೆ.ಎಚ್.ಪಟೇಲರು ನಮ್ಮ ಭಾಗಕ್ಕೆ ನೀರಾವರಿ ಸೌಲಭ್ಯ, ಕೂಡಲ ಸಂಗಮದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದರಿಂದ ಅವರನ್ನು ಇಂದಿಗೂ ನೆನಪು ಮಾಡಿಕೊಳ್ಳುತ್ತೇವೆ. ನವೆಂಬರ್ ತಿಂಗಳಿಗೆ ಬಿಜೆಪಿ ರಾಜ್ಯಾಧ್ಯಕ್ಷರ ಅವಧಿ ಮುಗಿಯ ಲಿದೆ. ಕೇಂದ್ರದ ನಾಯಕರಿಗೆ ಯಡಿಯೂರಪ್ಪ ಮತ್ತು ಅವರ ಮಗನನ್ನು ನಿರ್ಲಕ್ಷೆ ಮಾಡಿದರೆ ರಾಜ್ಯದಲ್ಲಿ ಬಿಜೆಪಿಗೆ ಸ್ಥಾನವಿಲ್ಲ



ಎಂಬ ಸಂದೇಶವನ್ನು ರವಾನಿಸುವುದಕ್ಕಾಗಿ ಚಿತ್ರದುರ್ಗದ ಕಾರ್ಯಕ್ರಮವನ್ನು ಮಾಡುತ್ತಿದ್ದಾರೆ ಎಂದು ಹೇಳಿದರು.

ನಾನು ದುಡ್ಡು ಮಾಡಿಕೊಳ್ಳುವ ಉದ್ದೇಶಕ್ಕಾಗಿ ರಾಜಕಾರಣ ಮಾಡುತ್ತಿಲ್ಲ. ರೈತರಿಗೆ, ಸಾಮಾನ್ಯ ಜನರಿಗೆ ಅನುಕೂಲವಾಗುವ ಆಡಳಿತ ನೀಡುವುದು ನನ್ನ ಗುರಿಯಾಗಿದೆ. ಮುಂದಿನ 2028ರ ಚುನಾವಣೆಯಲ್ಲಿ ನನ್ನ ಪಕ್ಷವೇ ಅಧಿಕಾರಕ್ಕೆ ಬರಲಿದೆ ಎಂದರು.

ಬಿಜೆಪಿಯಲ್ಲಿ ನರೇಂದ್ರ ಮೋದಿ ಅಂತಹ ಪ್ರಾಮಾಣಿಕರಿದ್ದು, ಲೋಕಸಭಾ ಚುನಾವಣೆಯಲ್ಲಿ ಮೋದಿ ಅವರಿಗೆ ಬೆಂಬಲ ನೀಡಲಿದ್ದು, ರಾಜ್ಯದಲ್ಲಿ ಕುಟುಂಬ ರಾಜಕಾರಣದ ವಿರುದ್ಧ ನನ್ನ ಹೋರಾಟ ನಿರಂತರವಾಗಿರಲಿದೆ ಎಂದರು.

ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಶೂನ್ಯವಾಗಿದೆ. ಮುಸ್ಲಿಮರಿಗೆ ₹6 ಸಾವಿರ ಕೋಟಿ ಅನುದಾನವನ್ನು ನೀಡಿದ್ದಾರೆ. ಒಂದು ಕೋಮಿಗೆ ಸೀಮಿತವಾಗಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ಹಿಂದುಳಿದ, ದಲಿತ ವರ್ಗದ ಜನರ ಹೆಸರೇಳಿ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯನವರು ಅವರಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಯತ್ನಾಳ್ ಕುಟುಕಿದರು.

# 6ಕ್ಕೆ ವಿಶ್ವಕರ್ಮ ಸಮಾಜ ಸಂಘದಿಂದ ಸಾಮೂಹಿಕ ಉಪನಯನ, ವಿವಾಹ

## ಕಾಳಿಕಾಂಬ ವಿಶ್ವಕರ್ಮ ಕಲ್ಯಾಣ ಮಂಟಪದಲ್ಲಿ ಆಯೋಜನೆ: ಮುಖಂಡರು

• **ಕನ್ನಡಪ್ರಭ ವಾರ್ತೆ** ದಾವಣಗೆರೆ

ವಿಶ್ವಕರ್ಮ ಸಮಾಜ ಸಂಘ, ದಾವಣಗೆರೆ ಮತ್ತು ಜಿಲ್ಲೆಯ ವಿಶ್ವಕರ್ಮ ಸಮಾಜದ ಎಲ್ಲ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ 43ನೇ ವರ್ಷದ ಸಾಮೂಹಿಕ ಉಪನಯನ ಮತ್ತು ವಿವಾಹ ಮಹೋತ್ಸವವನ್ನು ಮೇ 6ರಂದು ಇಲ್ಲಿನ ಶ್ರೀ ಕಾಳಿಕಾ ದೇವಿ ರಸ್ತೆಯ ಶ್ರೀ ಕಾಳಿಕಾಂಬ ವಿಶ್ವಕರ್ಮ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾಗಿದೆ ಎಂದು ಸಂಘದ ಕಾರ್ಯಕಾರಿ ಸಮಿತಿಯ ಅಧ್ಯಕ್ಷ ಆರ್. ವಿಜಯಕುಮಾರ ಹಾಗೂ ಪ್ರಧಾನ ಕಾರ್ಯದರ್ಶಿ ವಿ.ಎಂ.ಕೊಟ್ರೇಶಾಚಾರ್ ತಿಳಿಸಿದರು.

ಭಾನುವಾರ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಬೆಳಗ್ಗೆ 6.30 ರಿಂದ 8.25 ರವರೆಗೆ ಯಜ್ಞೋಪವೀತ ಧಾರಣೆ ಮತ್ತು ಬ್ರಹ್ಮೋಪದೇಶದ ನಂತರ 8.30 ರಿಂದ 9.30 ರವರೆಗೆ ಸಾಮೂಹಿಕ ವಿವಾಹಗಳು, ಮಾಂಗಲ್ಯಧಾರಣೆ, ಲಾಜಹೋಮ ಹಾಗೂ ಸಪ್ತಪದಿ ನಾಗವಲ್ಲಿ ಮುಂತಾದ ವಿವಾಹ ವಿಧಿವಿಧಾನಗಳು ಜರುಗಲಿವೆ ಎಂದು ತಿಳಿಸಿದರು.

ಬೆಳಗ್ಗೆ 11 ಗಂಟೆಗೆ ಧಾರ್ಮಿಕ ಸಭಾ ಕಾರ್ಯಕ್ರಮವು ಕೊಪ್ಪಳ ಜಿಲ್ಲೆಯ ಶ್ರೀಮದ್ ಆನೇಗುಂದಿ ಮಹಾಸಂಸ್ಥಾನ ಸರಸ್ವತಿ ಪೀಠ ಶ್ರೀಮಠ ಗಿಣಿಗೇರಾದ ಅಭಿನವಶ್ರೀ ಕಂಠಸ್ವಾಮಿಗಳು, ಅವರಗೊಳ್ಳ ಪುರವರ್ಗ ಹಿರೇಮಠದ ಓಂಕಾರ ಶಿವಾಚಾರ್ಯಸ್ವಾಮಿ ಗಳ ಸಾನ್ನಿಧ್ಯದಲ್ಲಿ ನಡೆಯಲಿದೆ. ಅಧ್ಯಕ್ಷತೆ ಯನ್ನು ವಿಶ್ವಕರ್ಮ ಸಮಾಜ ಸಂಘದ ಅಧ್ಯಕ್ಷ ಆರ್. ವಿಜಯಕುಮಾರ ವಹಿಸುವರು ಎಂದು ತಿಳಿಸಿದರು.

ಬಿ.ಎಸ್.ಚನ್ನಬಸಪ್ಪ ಅಂಡ್ ಸನ್ಸ್ ಮಾಲೀಕ ಬಿ.ಸಿ.ಉಮಾಪತಿ, ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ಬಸಾಪುರದ ಬಿ.ನಾಗೇಂದ್ರಚಾರ್, ಶ್ರೀ ಜಗದ್ಗುರು ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಶ್ರೀಕ್ಷೇತ್ರ ವರವಿಯ ಅಧ್ಯಕ್ಷ ಮೋಹನ್ ಎಸ್.ನರಗುಂದ, ಶೈಕ್ಷಣಿಕ ಬಹುಮಾಧ್ಯಮ ಸಂಶೋಧನ ಕೇಂದ್ರದ ಪ್ರಾಧ್ಯಾಪಕ ಡಾ. ಬಿ. ಶ್ರೀಕಂಠಾಚಾರ್, ಶ್ರೀ ಮಹಿಷಮರ್ದಿನಿ ಶ್ರೀರೇಣುಕ ಯಲ್ಲಮ್ಮ ದೇವಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಸರ್ವೇಶಾಚಾರ್, ಕರ್ನಾಟಕ ರಾಜ್ಯ ವಿಶ್ವಕರ್ಮ ಸಮಾಜದ ನಿರ್ದೇಶಕ ಎಚ್.ಪಿ. ರಾಜೇಂದ್ರಚಾರ್, ಸಿದ್ದಾಪುರದ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿಯ ತರಬೇತಿದಾರ ಪ್ರಶಾಂತ್ ಜಿ. ಆಚಾರ್ಯ, ಮುಖ್ಯಶಿಕ್ಷಕ ಬಿ.ಮಂಜುನಾಥಾಚಾರ್ ಇತರರು ಭಾಗವಹಿಸುವರು ಎಂದರು.

ಸುದ್ದಿಗೋಷ್ಠಿಯಲ್ಲಿ ವಿಶ್ವಕರ್ಮ ಸಮಾಜದ ಕೆ.ಎ.ಮನೋಹರ, ಸಿ.ಪಿ. ಪೂರ್ವಾಚಾರ್, ಎಂ.ಡಿ. ಮೌನೇಶ್ವರಾಚಾರ್, ಬಿ.ವಿ.ರಾಜಶೇಖರ, ಎ.ಆರ್. ಮುರುಳಿ ಧರಾಚಾರ್, ಬಿ.ಟಿ.ಸತೀಶ್ ಕುಮಾರ, ಕೆ.ಎಂ.ಬಸವರಾಜ, ವರದಾಚಾರ್‌ಪುಟಗ ನಾಳ್, ಜಿ.ಎನ್. ಗಣೇಶ್, ಎಂ.ಪಿ. ರಮೇಶಾಚಾರ್ ಮುದಹದಡಿ, ಬಿ.ಸಿ. ರಮೇಶಾಚಾರ್ ದೊಡ್ಡಬಾತಿ, ರಾಘವೇಂದ್ರ ಚಾರ್‌ಶಿಲ್ಪಿ, ಈ. ಲಿಂಗರಾಜ್ ಇದ್ದರು.




ದಾವಣಗೆರೆಯಲ್ಲಿ ವಿಶ್ವಕರ್ಮ ಸಮಾಜ ಸಂಘದಿಂದ ರಂದು ಸಾಮೂಹಿಕ ಉಪನಯನ, ವಿವಾಹ ಮಹೋತ್ಸವ ಹಮ್ಮಿಕೊಂಡಿರುವ ಕುರಿತು ಆರ್. ವಿಜಯಕುಮಾರ, ವಿ.ಎಂ. ಕೊಟ್ರೇಶಾಚಾರ್ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

**ಧಾರ್ಮಿಕ ಸೇವೆ** | ಬಳ್ಳೇಶ್ವರದಲ್ಲಿ ನಾಗಶಿಲಾ ಪುನರ್ ಪ್ರತಿಷ್ಠಾಪನೆ ಧರ್ಮ ಸಭೆಯಲ್ಲಿ ಈಶ್ವರಾನಂದಪುರಿ ಶ್ರೀ ಅಭಿಮತ

# ಜಗತ್ತು ಜೈನ ಧರ್ಮ ಒಪ್ಪಿದ್ದರೆ ಯುದ್ಧಗಳೇ ಇರುತ್ತಿರಲಿಲ್ಲ

• **ಕನ್ನಡಪ್ರಭ ವಾರ್ತೆ** ಹೊನ್ನಾಳಿ

ಅಹಿಂಸಾ ತತ್ವದ ಜೈನ ಧರ್ಮವನ್ನು ಇಡೀ ವಿಶ್ವ ಒಪ್ಪಿಕೊಂಡಿದ್ದರೆ ಜಗತ್ತಿನಲ್ಲಿ ಯುದ್ಧಗಳೇ ಇರುತ್ತಿರಲಿಲ್ಲ ಎಂದು ಹೊಸದುರ್ಗ ಕೆಲ್ಲೋಡು ಕನಕ ಗುರುಪೀಠದ ಈಶ್ವರಾನಂದಪುರಿ ಮಹಾಸ್ವಾಮಿಜಿ ಅಭಿಮತ ವ್ಯಕ್ತಡಿಸಿದರು.

ತಾಲೂಕಿನ ಬಳ್ಳೇಶ್ವರ ಗ್ರಾಮದಲ್ಲಿ 1008 ಭಗವಾನ್. ಪಾರ್ಶ್ವನಾಥ ದಿಗಂಬರ ಜೈನ ಟ್ರಸ್ಟ್ ವತಿಯಿಂದ ಭಾನುವಾರ ಐತಿಹಾಸಿಕ ನಾಗಶಿಲಾ ಪುನರ್‌ಪ್ರತಿಷ್ಠಾಪನೆ ನಿಮಿತ್ತ ವಿವಿಧ ಧಾರ್ಮಿಕ ಕೈಂಕರ್ಯಗಳು ನಡೆದ ಬಳಿಕ ಧರ್ಮಸಭೆ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಎಲ್ಲಾ ಧರ್ಮಗಳ ಸಾರ ಒಂದೇ ಆಗಿದೆ. ಎಲ್ಲರೂ ಕೂಡಿ ಬಾಳಿದರೆ ಸ್ವರ್ಗ ಸುಖ ಎಂದು ಮಹಾತ್ಮರು ಸಮಾಜಕ್ಕೆ ತಿಳಿಸಿಕೊಟ್ಟಿದ್ದಾರೆ. ಇದರಂತೆ ಸಮಾಜದಲ್ಲಿ ಎಲ್ಲರೂ ಶಾಂತಿ, ಸಹಬಾಳ್ವೆಯಿಂದ ಬದುಕಿದರೆ ಸ್ವರ್ಗದ ಸಾಕ್ಷಾತ್ಕಾರವನ್ನು ಕಾಣಬಹುದು ಎಂದರು.

ಸಾನ್ನಿಧ್ಯ ವಹಿಸಿದ್ದ ಹೊಸದುರ್ಗದ ಕುಂಚಿಟಿಗ ಮಹಾಸಂಸ್ಥಾನದ ಡಾ.ಶಾಂತವೀರ ಮಹಾಸ್ವಾಮೀಜಿ ಮಾತನಾಡಿ, ಜಗತ್ತಿನಲ್ಲಿ ಬುದ್ಧ, ಬಸವ, ಗಾಂಧೀಜಿಯವರ ತತ್ವ-ಸಿದ್ಧಾಂತಗಳನ್ನು ಅಕ್ಷರಶಃ ಪರಿಪಾಲಿಸಿಕೊಂಡು ಬರುತ್ತಿರುವುದು ಜೈನ ಧರ್ಮ. ಹೊನ್ನಾಳಿ ಕ್ಷೇತ್ರದ ಶಾಸಕ ಡಿ.ಜಿ.ಶಾಂತನಗೌಡ ಅವರು ತಾವು ಕಂಡಂತೆ ಎಲ್ಲ ಜಾತಿ ಧರ್ಮ, ಸಮಾಜದವರನ್ನು ಸಮಾನವಾಗಿ ಕಾಣುವ ವ್ಯಕ್ತಿತ್ವ ಹೊಂದಿದ್ದಾರೆ. ಸರ್ಕಾರದ ₹50 ಕೋಟಿಯಲ್ಲಿ ಸುಮಾರು ₹13 ಕೋಟಿ ಅನುದಾವನ್ನು ಸಮನಾಗಿ ಎಲ್ಲ ಧರ್ಮದವರಿಗೆ ನೀಡುವ ಮನೋಭಾವನೆ ತೋರಿರುವುದು ಶ್ಲಾಘನೀಯ ಎಂದು ಹೇಳಿದರು.

ಹೊನ್ನಾಳಿ ಹಿರೇಕಲ್ಮಠದ ಡಾ. ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮೀಜಿ ಕೂಡ ಕಾರ್ಯಕ್ರಮ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ, ಬಳ್ಳೇಶ್ವರ ಗ್ರಾಮ ಜೈನ ಬಸದಿ ಹಾಗೂ ದೇಗುಲವಿರುವ ಪರಮಪವಿತ್ರ ಹಾಗೂ ಅತ್ಯಂತ ಶಾಂತಿ ಸಹಬಾಳ್ವೆಯ ಗ್ರಾಮವಾಗಿದೆ. ಈ ಗ್ರಾಮದಲ್ಲಿ ಐತಿಹಾಸಿಕ ಹಿನ್ನಲೆಯುಳ್ಳ ನಾಗಶಿಲೆಯ ಪುನರ್‌ಪ್ರತಿಷ್ಠಾಪನೆ ಕೂಡ ತುಂಬಾ ಉತ್ತಮ ಕೆಲಸವಾಗಿದೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಡಿ.ಜಿ.ಶಾಂತನಗೌಡ ಮಾತನಾಡಿ, ಇಲ್ಲಿನ ಜೈನ ಬಸದಿ ಸಮೀಪದಲ್ಲಿ ನೂತನವಾಗಿ ಸಮುದಾಯ ಭವನ ನಿರ್ಮಾಣಕ್ಕೆ ಚಾಲನೆ ನೀಡಿದ್ದು, ಸುಮಾರು ₹20 ಲಕ್ಷ ಅನುದಾನ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಕೂಡ ಅನುದಾನ ನೀಡಲಾಗುವುದು. ಈ ಕೆಲಸವನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕಾಗಿದೆ ಎಂದರು.

ಗ್ರಾಮದ ಯುವ ಮುಖಂಡ ದರ್ಶನ್ ಬಳ್ಳೇಶ್ವರ ಪ್ರಾಸ್ತಾವಿಕವಾಗಿ ಮಾತನಾಡಿ, ಇಲ್ಲಿಯವರೆಗೆ ನಾಗಶಿಲಾದ ಐತಿಹಾಸಿಕ ಹಿನ್ನೆಲೆ ಬಗ್ಗೆ ತಿಳಿದಿರಲ್ಲಿಲ್ಲ. ಇತಿಹಾಸತಜ್ಞರಿಂದಾಗಿ ಈ ನಾಗಶಿಲೆ ಇಂದಿನದಲ್ಲ, ಹೊಯ್ಸಳ ಕಾಲದ 8ನೇ ಶತಮಾನದ್ದು ಎಂದು ತಿಳಿದುಬಂದಿದೆ. ಇದೀಗ ಅದು ಪುನರ್‌ಪ್ರತಿಷ್ಠಾಪನೆಯಾಗುತ್ತಿದೆ ಎಂದು ತಿಳಿಸಿದರು.

ಮುಖಂಡ ಸುರೇಶ್, ಭದ್ರಾವತಿ ಪ್ರಕಾಶ್ ಚಂದ್ ಜೈನ್, ಪಿ.ಭರತ್ ರಾಜ್, ಚಳ್ಳಕೆರೆ ಮಾತನಾಡಿದರು. ಅಧ್ಯಕ್ಷತೆಯನ್ನು 1008 ಭಗವಾನ್ ಪಾರ್ಶ್ವನಾಥ ದಿಗಂಬರ ಜೈನ ಟ್ರಸ್ಟ್ ಅಧ್ಯಕ್ಷ ಎಂ. ಪ್ರಮೋದ್ ವಹಿಸಿದ್ದರು. ಗ್ರಾಮದ ಮುಖಂಡರು, ಗ್ರಾಮಸ್ಥರು ಭಾಗವಹಿಸಿದ್ದು, ಅನ್ನಸಂತರ್ಪಣೆ ನಡೆಯಿತು.



ಹೊನ್ನಾಳಿ ತಾ. ಬಳ್ಳೇಶ್ವರದಲ್ಲಿ ಐತಿಹಾಸಿಕ ನಾಗಶಿಲಾ ಪುನರ್‌ಪ್ರತಿಷ್ಠಾಪನೆ ಧರ್ಮಸಭೆಯಲ್ಲಿ ಕನಕ ಗುರುಪೀಠದ ಈಶ್ವರಾನಂದಪುರಿ ಸ್ವಾಮೀಜಿ ಆಶೀರ್ವಚನ ನೀಡಿದರು. ಕುಂಚಿಟಿಗ ಗುರುಪೀಠ, ಶಾಸಕ ಡಿ.ಜಿ.ಶಾಂತನಗೌಡ ಮತ್ತಿತರ ಗಣ್ಯರು ಇದ್ದರು.



ಹರಿಹರದ ತಾಪಂನಲ್ಲಿ ಶನಿವಾರ ಅಂಗವಿಕಲರ ಕಲ್ಯಾಣ ಇಲಾಖೆಯಿಂದ ಫಲಾನುಭವಿಗೆ ಶಾಸಕ ಬಿ.ಪಿ.ಹರೀಶ್ ತ್ರಿಚಕ್ರ ವಾಹನ ವಿತರಿಸಿದರು. ಇಲಾಖೆ ತಾಲೂಕು ಅಧಿಕಾರಿ ಶಶಿಕಲಾ, ಕೃಷಿ ಇಲಾಖೆ ಎಡಿ ನಟರಾಜ್ ಎಸ್., ಆಟೋ ಹನುಮಂತಪ್ಪ ಹಾಗೂ ಇತರರು ಇದ್ದರು.

### ಶಿವಶಂಕರೇ ಗೌಡ ಪ್ರವಾಸ ಕಾರ್ಯಕ್ರಮ

**ದಾವಣಗೆರೆ:** ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ನ್ಯಾಯಮೂರ್ತಿ ಟಿ.ಜಿ. ಶಿವಶಂಕರೇ ಗೌಡ ಮೇ 4 ರಂದು ಸಂಜೆ 4.30ಕ್ಕೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಪರಿವೀಕ್ಷಣೆಯನ್ನು ಕೈಗೊಳ್ಳಲಿದ್ದಾರೆ ಎಂದು ಆಯೋಗದ ರಿಜಿಸ್ಟ್ರಾರ್ ಹಾಗೂ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ.